ಶನಿವಾರ, 13.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 112
Digital Varthe Kannada Daily
Volume 01 - Issue 112
Saturday 13.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಸಿಲಿಂಡರ್ ಸ್ಫೋಟವಾಗಿ ಮನೆಯಲ್ಲಿದ್ದ 7 ಮಂದಿಗೆ ಗಂಭೀರ ಗಾಯ



**ಕೊಪ್ಪಳ:** ಜಿಲ್ಲೆಯ ಗಂಗಾವತಿ ತಾಲೂಕಿನ ಹೆಬ್ಬಾಳ ಗ್ರಾಮದಲ್ಲಿ ಭೀಕರ ಅನಿಲ ದುರಂ ತವೊಂದು ಸಂಭವಿಸಿದ್ದು, ಹೊಸ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಸುತ್ತಮುತ್ತಲಿನ ಮನೆಗಳಿಗೂ ಹಾನಿಯಾಗಿ, ಕನಿಷ್ಠ 8 ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ. ಶುಕ್ರವಾರ ಮುಂಜಾನೆ ನಡೆದ ಈ ಘಟನೆಯು ಇಡೀ ಗ್ರಾಮದಲ್ಲಿ ಆತಂಕದ ವಾತಾವರಣ ಸೃಷ್ಟಿಸಿದೆ.

ಈ ಭಯಾನಕ ಸ್ಫೋಟದಲ್ಲಿ ಗಾಯಗೊಂಡವರನ್ನು ತಕ್ಷಣವೇ ಗಂಗಾವತಿ ಆಸ್ಪ ತ್ರೆಗೆ ದಾಖಲಿಸ ಲಾಗಿದೆ. ಅದೃಷ್ಟವಶಾತ್ ಸಾವು ಸಂಭವಿ ಸದಿದ್ದರೂ, ಗಾಯಾಳುಗಳು ತೀವ್ರ ಸುಟ್ಟ ಗಾಯಗಳಿಗೆ ಒಳಗಾಗಿದ್ದಾರೆ ಎಂದು ತಿಳಿದು ಬಂದಿದೆ. ಗಾಯಗೊಂಡವರು ರಾಜ (38), ಸುರೇಶ್ (35), ದುರುಗಪ್ಪ (27), ಹುಸೇನಮ್ಮ (40), ನಾಗರಾಜ (18), ದುರುಗಮ್ಮ (17), ವಿಷ್ಣು (16), ಶ್ರೀಕಾಂತ್ (22) ಎಂದು ಗುರುತಿಸಲಾಗಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದ್ದು, ಪ್ರಾಥಮಿಕ ಚಿಕಿತ್ಸೆಯ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಅವರನ್ನು ಉನ್ನತ ಆಸ್ಪತ್ರೆಗೆ ದಾಖಲಿಸುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಘಟನೆ ಹುಸೇನಮ್ಮ ಎಂಬುವರ ಮನೆಯಲ್ಲಿ ಸಂಭವಿಸಿದೆ. ಮನೆಯವರು ಇತ್ತೀಚೆಗೆ ಹೊಸದಾಗಿ ಗ್ಯಾಸ್ ಸಿಲಿಂಡರ್ ಅನ್ನು ತೆಗೆದುಕೊಂಡಿದ್ದರು. ಶುಕ್ರವಾರ ಮುಂಜಾನೆ ಅಡುಗೆ ಮಾಡಲು ಗ್ಯಾಸ್ ಸ್ಟೌವ್ ಅನ್ನು ಆನ್ ಮಾಡುವಾಗ, ಸಿಲಿಂಡರ್‌ನಿಂದ ತೀವ್ರವಾದ ಸ್ಫೋಟ ಸಂಭವಿಸಿದೆ ಎಂದು ತಿಳಿದು ಬಂದಿದೆ. ಸಿಲಿಂಡರ್‌ನಲ್ಲಿ ಅನಿಲ ಸೋರಿಕೆ ಇತ್ತು ಮತ್ತು ಮನೆಯೊಳಗೆ ಅನಿಲ ತುಂಬಿದ ಕಾರಣ, ಸ್ವಿಚ್ ಆನ್ ಮಾಡಿದ ತಕ್ಷಣ ಬೆಂಕಿ ಮತ್ತು ಸ್ಫೋಟ ಸಂಭವಿಸಿರಬಹುದು ಎಂದು ತಾಂತ್ರಿಕ ತಜ್ಞರು ಶಂಕಿಸಿದ್ದಾರೆ.

ಘಟನೆಯಲ್ಲಿ ಹುಸೇನಮ್ಮ ಅವರ ಇಡೀ ಮನೆ ಸಂಪೂರ್ಣವಾಗಿ ನೆಲಸಮವಾಗಿದೆ. ಮನೆಯಲ್ಲಿದ್ದ ವಸ್ತುಗಳು, ಗೋಡೆಗಳು ಮತ್ತು ಮೇಲ್ಛಾವಣಿಯು ಸಂಪೂರ್ಣವಾಗಿ ನಾಶವಾಗಿವೆ.ಸ್ಫೋಟದ ಒತ್ತಡ ತೀವ್ರವಾಗಿದ್ದರಿಂದ, ನೆಲಸಮವಾದ ಮನೆಯ ಅಕ್ಕಪಕ್ಕದಲ್ಲಿ ನಿಂತಿದ್ದ ಇತರರಿಗೂ ಸುಟ್ಟ ಗಾಯಗಳಾಗಿವೆ. ಅಷ್ಟೇ ಅಲ್ಲದೆ, ನೆರೆಹೊರೆಯ ಕೆಲವು ಮನೆಗಳ ಗೋಡೆಗಳು ಬಿರುಕು ಬಿಟ್ಟಿದೆ. ಈ ಘಟನೆಯು ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಸ್ಥಳೀಯ ಅಧಿಕಾರಿಗಳು ಮತ್ತು ವಿಪತ್ತು ನಿರ್ವಹಣಾ ತಂಡವು ನೆಲಸಮವಾದ ಮನೆಯ ಅವಶೇಷಗಳನ್ನು ತೆರವುಗೊಳಿಸುವ ಕಾರ್ಯ ಮುಂದುವರೆಸಿದ್ದಾರೆ.

ಪೊಲೀಸರು ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದು, ಸ್ಫೋಟಕ್ಕೆ ನಿಖರವಾದ ಕಾರಣ ಮತ್ತು ಗ್ಯಾಸ್ ಏಜೆನ್ಸಿಯ ಕಡೆಯಿಂದ ಯಾವುದೇ ನಿರ್ಲಕ್ಷ್ಯ ಇದೆಯೇ ಎಂಬುದರ ಕುರಿತು ತನಿಖೆ ನಡೆಸುತ್ತಿದ್ದಾರೆ. ಹೊಸ ಸಿಲಿಂಡರ್ ಸ್ಫೋಟಗೊಂಡ ಕಾರಣ, ಗ್ಯಾಸ್ ವಿತರಣೆ ಸಂಸ್ಥೆಯ ಸುರಕ್ಷತಾ ಮಾನದಂಡಗಳ ಬಗ್ಗೆಯೂ ಕೂಲಂಕುಷ ತನಿಖೆ ನಡೆಯುವ ಸಾಧ್ಯತೆ ಇದೆ.

## ಸಚಿವ ಎಚ್.ಎಂ.ರೇವಣ್ಣ ಪುತ್ರನಿಂದ ಹಿಟ್ & ರನ್: ಸ್ಥಳದಲ್ಲೇ ಯುವಕ ಸಾ*ವು



**ಬೆಂ ಗ ಳೂ ರು :** ಕಾಂಗ್ರೆಸ್‌ನ ಹಿರಿಯ ಮತ್ತು ಮಾಜಿ ಸಚಿವರಾದ ಎಚ್.ಎಂ. ರೇವಣ್ಣ ಪುತ್ರ ಶಶಾಂಕ್ ವಿರುದ್ಧ ಗಂಭೀರ ಆರೋಪವೊಂದು ಕೇಳಿಬಂದಿದೆ. ಅವರಿದ್ದ ಕಾರು ಡಿಕ್ಕಿ ಹೊಡೆದ ಪರಿಣಾಮ 23 ವರ್ಷದ ಯುವಕನೊಬ್ಬ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.


ಮೃತ ಯುವಕನನ್ನು ಮಾಗಡಿ ತಾಲೂಕಿನ ಬೆಳಗುಂಬ ಗ್ರಾಮದ ನಿವಾಸಿ ರಾಜೇಶ್ ಬಿ.ಜಿ. ಎಂದು ಗುರುತಿಸಲಾಗಿದೆ. ಈ ಘಟನೆಯು ನಿನ್ನೆ ರಾತ್ರಿ ಸುಮಾರು 10.30ರ ಸುಮಾರಿಗೆ ಗುಡೆಮಾರೇನಹಳ್ಳಿ ಟೋಲ್ ಬಳಿ ಸಂಭವಿಸಿದೆ. ರಾಜೇಶ್ ಅವರು ದಾಬಸ್ ಪೇಟೆಯಲ್ಲಿರುವ ಒಂದು ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದರು. ರಾತ್ರಿ ಪಾಳಿಯ ಕೆಲಸ ಮುಗಿಸಿ ತಮ್ಮ ಸ್ಕೂಟಿಯಲ್ಲಿ ವಾಪಸ್ ಮನೆಗೆ ಮರಳುತ್ತಿದ್ದರು. ಇದೇ ವೇಳೆ, ಶಶಾಂಕ್ ಅವರಿದ್ದ ಫಾರ್ಚುನರ್ ಕಾರು ವೇಗವಾಗಿ ಬಂದು ರಾಜೇಶ್ ಅವರ ಸ್ಕೂಟಿಗೆ ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆಗೆ ರಾಜೇಶ್ ತೀವ್ರ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

ಕಾರು ಡಿಕ್ಕಿ ಹೊಡೆದ ತಕ್ಷಣ, ಚಾಲಕ ಕಾರನ್ನು ನಿಲ್ಲಿಸದೆ, ಮೃತದೇಹವನ್ನು ರಸ್ತೆಯಲ್ಲೇ ಬಿಟ್ಟು ಸ್ಥಳದಿಂದ ಪರಾರಿಯಾಗಿದ್ದಾನೆ. ಕೂಡಲೇ ಸ್ಥಳೀಯರು ಕಾರನ್ನು ಹಿಂಬಾಲಿಸಿದ್ದಾರೆ. ಸ್ಥಳೀಯರು ಅಪಘಾತ ಸ್ಥಳದಿಂದ ಸುಮಾರು 5 ಕಿಲೋ ಮೀಟರ್ ದೂರದಲ್ಲಿರುವ ಸನ್ ಫ್ಲವರ್ ಆಯಿಲ್ ಫ್ಯಾಕ್ಟರಿ ಬಳಿ ಕಾರನ್ನು ತಡೆದು ನಿಲ್ಲಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕಾರಿನಲ್ಲಿದ್ದವರ ಕುರಿತು ಸ್ಥಳೀಯರು ನೀಡಿದ ಮಾಹಿತಿ ಪ್ರಕಾರ ಫಾರ್ಚುನರ್ ಕಾರಿನಲ್ಲಿ ಕಾಂಗ್ರೆಸ್ ನಾಯಕ ಎಚ್.ಎಂ. ರೇವಣ್ಣ ಅವರ ಪುತ್ರ ಶಶಾಂಕ್ ಅವರು, ಅವರ ಪತ್ನಿ, ಮಗು ಮತ್ತು ಒಬ್ಬ ವಯಸ್ಸಾದ ವ್ಯಕ್ತಿ ಪ್ರಯಾಣಿಸುತ್ತಿದ್ದರು. ಕಾರ್ ಚಾಲಕ ಎರಡು ಬೈಕ್‌ಗಳನ್ನು ಓವರ್ ಟೇಕ್ ಮಾಡಲು ಹೋಗಿ ನಿಯಂತ್ರಣ ಕಳೆದುಕೊಂಡು ಸ್ಕೂಟಿಗೆ ಗುದ್ದಿದೆ ಎಂದು ಸ್ಥಳೀಯರು ಹೇಳಿದ್ದಾರೆ.

ಕಾರನ್ನು ತಡೆದು ನಿಲ್ಲಿಸುತ್ತಿದ್ದಂತೆಯೇ, ಅಲ್ಲಿದ್ದ ಸ್ಥಳೀಯರ ಎದುರು ಶಶಾಂಕ್ ನಾನು ಎಚ್.ಎಂ. ರೇವಣ್ಣ ಅವರ ಮಗ ಎಂದು ದೌಲತ್ತು ತೋರಿಸಿ ಗದರಿದ್ದಾನೆ ಎಂದು ಪ್ರತ್ಯಕ್ಷದರ್ಶಿಗಳು ಆರೋಪ ಮಾಡಿದ್ದಾರೆ. ಮೃತ ರಾಜೇಶ್ ಅವರು ಮಾಗಡಿ ತಾಲೂಕಿನ ಬೆಳಗುಂಬ ಗ್ರಾಮದ ಬಡ ಕುಟುಂಬದ ಯುವಕ. ಫ್ಯಾಕ್ಟರಿಯಲ್ಲಿ ಕೆಲಸ ಮಾಡಿ ಬರುತ್ತಿದ್ದ ಅವರ ಸಂಪಾದನೆಯೇ ಅವರ ಕುಟುಂಬಕ್ಕೆ ಪ್ರಮುಖ ಆಧಾರವಾಗಿತ್ತು. ರಾಜೇಶ್ ಅವರ ಕುಟುಂಬದಲ್ಲಿ ತಂದೆ, ತಾಯಿ ಮತ್ತು ಇಬ್ಬರು ಅಕ್ಕ ಇದ್ದಾರೆ. ಕುಟುಂಬಕ್ಕೆ ಆಧಾರವಾಗಿದ್ದ ಏಕೈಕ ಪುತ್ರನನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲುಮುಟ್ಟಿದೆ.

ಈ ದುರ್ಘಟನೆಯು ಕುದೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ರಾಜೇಶ್ ಸಾವಿಗೆ ನ್ಯಾಯ ಒದಗಿಸಬೇಕು ಮತ್ತು ಕಾರು ಚಾಲಕ ಹಾಗೂ ಕಾರಿನಲ್ಲಿದ್ದವರು ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಮೃತ ಯುವಕನ ಕುಟುಂಬ ಮತ್ತು ಸ್ಥಳೀಯರು ಒತ್ತಾಯಿಸಿದ್ದಾರೆ.

## 2025-26ರ ಸಾಲಿನಲ್ಲಿ 377 ರೈತ ಆತ್ಮ ಹತ್ಯೆ ಪ್ರಕರಣಗಳು ದಾಖಲು..!



**ಬೆಂಗಳೂರು:** ರಾಜ್ಯದ ಕೃಷಿ ವಲಯವು ಎದುರಿಸುತ್ತಿರುವ ತೀವ್ರ ಸಂಕಷ್ಟಕ್ಕೆ ಕನ್ನಡಿ ಹಿಡಿಯುವಂತಹ ಆಘಾತಕಾರಿ ಮಾಹಿತಿಯೊಂದು ಲಭ್ಯವಾಗಿದೆ. ಕರ್ನಾಟಕದಲ್ಲಿ 2025-26ನೇ ಆರ್ಥಿಕ ವರ್ಷದ ಆರಂಭಿಕ ಅವಧಿಯಲ್ಲಿಯೇ ಒಟ್ಟು 377 ರೈತರು ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣಗಳು ದಾಖಲಾಗಿವೆ.

ದಾಖಲಾದ 377 ಪ್ರಕರಣಗಳ ಪೈಕಿ, ರೈತರ ಆತ್ಮಹತ್ಯೆ ಎಂದು ಪರಿಗಣಿಸಲು ಇರುವ ಮಾನದಂಡಗಳ ಆಧಾರದ ಮೇಲೆ ಕೆಲವು ಪ್ರಕರಣಗಳನ್ನು ತಿರಸ್ಕರಿಸಲಾಗಿದೆ ಮತ್ತು ಬಹುಪಾಲು ಪ್ರಕರಣಗಳು ಇನ್ನೂ ವಿಲೇವಾರಿಗೆ ಬಾಕಿ ಇವೆ. ಅಂಕಿ-ಅಂಶಗಳ ವಿವರ ಇಂ ತಿದೆ: ತೀ ರ್ಮಾ ನಿ ಸ ಬೇ ಕಾ ದ 331 ಪ್ರಕರಣಗಳ ಪೈಕಿ, ಪ್ರಾಥಮಿಕ ತನಿಖೆ ಮತ್ತು ಮಾನದಂಡಗಳ ಆಧಾರದ ಮೇಲೆ, 310 ಪ್ರಕರಣಗಳು ಅರ್ಹ ಎಂದು ಪರಿಗಣಿಸಲಾಗಿದೆ. ಅಂದರೆ, ಈ 310 ಕುಟುಂಬಗಳಿಗೆ ಸರ್ಕಾರದಿಂದ ಪರಿಹಾರ ದೊರೆಯುವ ಸಾಧ್ಯತೆ ಇದೆ.

ಈ ಆಘಾತಕಾರಿ ಸಂಖ್ಯೆಯು ಕೃಷಿ ಇಲಾಖೆ, ಕಂದಾಯ ಇಲಾಖೆ ಮತ್ತು ಜಿಲ್ಲಾಡಳಿತಗಳ ಮೇಲೆ ಅಪಾರ ಒತ್ತಡವನ್ನು ಹೇರಿದ್ದು, ಪ್ರತಿ ಪ್ರಕರಣ ವನ್ನು ನಿಗದಿತ ಮಾನ ದಂಡಗಳ ಅಡಿಯಲ್ಲಿ ಪರಿ ಶೀಲಿಸಿ, ಅವುಗಳನ್ನು ಅರ್ಹ ಅಥವಾ ಅನರ್ಹ ಎಂದು ನಿರ್ಧರಿಸಲಾಗುತ್ತದೆ. ರೈತರ ಆತ್ಮಹತ್ಯೆಗೆ ಪ್ರಮುಖ ಕಾರಣಗಳು

ಪ್ರತಿ ವರ್ಷವೂ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಲು ಪ್ರಮುಖವಾಗಿ ಈ ಕೆಳಗಿನ ಅಂಶಗಳು ಕಾರಣವಾಗುತ್ತಿವೆ

ರೈತರ ಆತ್ಮಹತ್ಯೆಯನ್ನು ತಡೆಯಲು ಸರ್ಕಾರವು ಈಗಾಗಲೇ ಹಲವಾರು ಯೋಜನೆ ಗಳನ್ನು ಜಾರಿಗೊಳಿಸಿದ್ದರೂ, ಸಾವಿನ ಸಂಖ್ಯೆ ನಿಯಂತ್ರಣಕ್ಕೆ ಬರುತ್ತಿಲ್ಲ. ಇದಕ್ಕೆ ಈ ಅಂಕಿ ಅಂಶವೂ ಉದಾಹರಣೆಯಾಗಿದೆ. ಸರ್ಕಾರವು ಆದಷ್ಟು ಶೀಘ್ರವಾಗಿ ಅರ್ಹ ಎಂದು ಪರಿಗಣಿಸಲಾದ 310 ಪ್ರಕರಣಗಳಿಗೆ ಪರಿಹಾರ ಹಣವನ್ನು ಬಿಡುಗಡೆ ಮಾಡಬೇಕು. ಇದರ ಜೊತೆಗೆ, ಆತ್ಮಹತ್ಯೆಯನ್ನು ತಡೆಯಲು ತಕ್ಷಣದ ಕ್ರಮಗಳನ್ನು ಕೈಗೊಳ್ಳುವ ಅವಶ್ಯಕತೆಯಿದೆ:

ಇಂತಹ ಸೂಕ್ಷ್ಮ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ, ಬ್ಯಾಂಕುಗಳು, ಮತ್ತು ಸಮಾಜದ ಎಲ್ಲಾ ವರ್ಗದವರು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಬೇಕಾದ ಅನಿವಾರ್ಯತೆ ಇದೆ.

## ಲಕ್ಷಾಂತರ ರೂ ಬೆಲೆ ಬಾಳುವ ಗಿಳಿ ರಕ್ಷಿಸಲು ಹೋಗಿ ದುರಂತ ಅಂತ್ಯಕಂಡ ಯುವಕ



**ಬೆಂಗಳೂರು:** ಹೈಟೆನ್ಷನ್ ವೈರ್ ಕಂಬದ ಮೇಲೆ ಕುಳಿತಿದ್ದ ಸುಮಾರು 2 ಲಕ್ಷ ರೂ ಬೆಲೆ ಬಾಳುವ ಫಾರಿನ್ ಗಿಳಿಯನ್ನು ರಕ್ಷಿಸಲು ಹೋಗಿ ವಿದ್ಯುತ್ ಶಾಕ್ ಹೊಡೆದು ಯುವಕನೋರ್ವ ಸಾವನ್ನಪ್ಪಿರುವಂತಹ ಘಟನೆ ಗಿರಿನಗರದ ಖಾಸಗಿ ಅಪಾರ್ಟ್‌ಮೆಂಟ್‌ನಲ್ಲಿ ನಡೆದಿದೆ. ಅರುಣ್ ಕುಮಾರ್ (32) ಮೃತ ದುರ್ದೈವಿ. ಸದ್ಯ ಗಿರಿನಗರ ಪೊಲೀಸರು ಘಟನೆ ಬಗ್ಗೆ ತನಿಖೆ ನಡೆಸಿದ್ದಾರೆ.

ಗಿಳಿಯೊಂದು ಗಿರಿನಗರದ ಖಾಸಗಿ ಅಪಾರ್ಟ್‌ಮೆಂಟ್ ಒಳಭಾಗದಲ್ಲಿರುವ ಹೈಟೆನ್ಷನ್ ವೈರ್ ಕಂಬದ ಮೇಲೆ ಕುಳಿತಿತ್ತು. ಇದನ್ನು ನೋಡಿದ ಅರುಣ್ ಕುಮಾರ್, ಈ ವೇಳೆ ಗಿಳಿ ರಕ್ಷಣೆಗೆ ಮುಂದಾಗಿದ್ದಾರೆ. ಅಪಾರ್ಟ್‌ಮೆಂಟ್ ಕಾಪೌಂಡ್ ಮೇಲೆ ನಿಂತು ಸ್ಟೀಲ್ ಪೈಪ್‌ಗೆ ಕಟ್ಟಿಗೆ ಸೇರಿಸಿ ಓಡಿಸಲು ಪ್ರಯತ್ನಿಸಿದ್ದಾರೆ. ಅರುಣ್ ಕುಮಾರ್ ಅವರ ಉದ್ದೇಶ ಸರಿಯಾಗಿದ್ದರೂ ವಿಧಿಯಾಟ ಬೇರೆಯೇ ಇತ್ತು. ಈ ವೇಳೆ 66 ಸಾವಿರ ಕೆವಿ



ವಿದ್ಯುತ್ ವೈರ್‌ನಿಂದ ಹೊಡೆದ ಶಾಕ್‌ಗೆ ಅರುಣ್ ಕಾಪೌಂಡ್ ಮೇಲಿಂದ ಕೆಳಗೆ ಬಿದ್ದಿದ್ದಾರೆ. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿದೆ. ಆದರೆ ಅಷ್ಟರಲ್ಲಿ ಅವರು ಮೃತಪಟ್ಟಿದ್ದಾರೆ. ಸುಮಾರು 12 ವರ್ಷ ವಿವಿಧ ಸ್ಪರ್ಧೆಯಲ್ಲಿ ಗೆಲುವು ಸಾಧಿಸಿ ಬಹುಮಾನ ಗೆದ್ದಿತ್ತು. ಮಸಣದ ದೊರೆ, ಕಿಲ್ಲಿಂಗ್ ಸ್ಟಾರ್, ಮಲೆನಾಡ ಜನರ ಜೀವಾ, ಕಾಂತೇಶನ ವರಪ್ರಸಾದ ಎಂದು ಕೊಬ್ಬರಿ ಹೋರಿ ಬಿರುದು ಪಡೆದಿತ್ತು.

ಮನೆ ಮುಂಭಾಗ ಹೋರಿಯ ದೇವಸ್ಥಾನ ಕಟ್ಟಿಸಲು ಮಾಲೀಕ ಕಾಂತೇಶ ನಾಯಕ್ ನಿರ್ಧರಿಸಿದ್ದಾರೆ. ನಿವಾಸಿಗಳು ಆಕ್ರೋಶ ಇನ್ನು ಸ್ಥಳಕ್ಕೆ ಬೆಸ್ಕಾಂ ಮತ್ತು ಕೆಇಬಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಸದ್ಯ ಅಪಾರ್ಟ್‌ಮೆಂಟ್ ಒಳಗೆ 65 ಸಾವಿರ ಕೆವಿ ಸಾಮರ್ಥ್ಯದ ವೈರ್‌ಗಳು ಇರುವುದಕ್ಕೆ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಎಸ್‌ಬಿಜಿ ಕ್ರಿಕೆಟ್ ಚಾಂಪಿಯನ್ಸ್ ಕಪ್ ಪಂದ್ಯಾವಳಿ



**ಹೊಸಕೋಟೆ:** ಶಾಸಕ ಶರತ್ ಬಚ್ಚೇಗೌಡರ ಹುಟ್ಟು ಹಬ್ಬದ ಪ್ರಯುಕ್ತ ಟೀಮ್ ಎಸ್‌ಬಿಜಿ ಹಾಗೂ ಸಮಸ್ತ ಫೌಂಡೇಷನ್ ಜಂಟಿಯಾಗಿ ಇಂದಿನಿಂದ (ಡಿ.12 ರಿಂದ ) ಎರಡು ದಿನಗಳ ಕಾಲ ಎಸ್‌ಬಿಜಿ ಕ್ರಿಕೆಟ್ ಚಾಂಪಿಯನ್ಸ್ ಕಪ್ ಪಂದ್ಯಾವಳಿಯನ್ನು ಆಯೋಜಿಸಿದೆ ಎಂದು ಮಾಜಿ ಸಂಸದ ಬಿ.ಎನ್ ಬಚ್ಚೇಗೌಡ ಹೇಳಿದರು.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಕ್ರಿಕೆಟ್ ಪಂದ್ಯಾವಳಿ ಲೋಗೋ ಹಾಗೂ ಆಟಗಾರರಿಗೆ ಜರ್ಸಿ (ಸಮವಸ್ತ್ರ) ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.


ಹೊಸಕೋಟೆ ಇತಿಹಾಸದಲ್ಲಿಯೇ ಇದೇ ಪ್ರಥಮ ಬಾರಿಗೆ ಎಸ್‌ಬಿಜಿ ಕ್ರಿಕೆಟ್ ಪಂದ್ಯಾವಳಿಯನ್ನು ಪ್ರಾರಂಭಿಸಲಾಗಿದ್ದು, ಸಿಜನ್ 1 ರ ಮೊದಲ ಹಂತ ಇದೇ ಡಿ 12 ಮತ್ತು 14 ರಂದು ಎರಡು ದಿನಗಳ ಕಾಲ ನಡೆಯಲಿದೆ. ಹೊಸಕೋಟೆ ಚನ್ನ ಬೈರೇಗೌಡ ಕ್ರೀಡಾಂಗಣ ಹಾಗೂ ಪೂಜೇನಾ ಅಗ್ರಹಾರ ಕ್ರೀಡಾಂಗಣದಲ್ಲಿ ಪಂದ್ಯಾವಳಿ ನಡೆಯಲಿದ್ದು, ಈಗಾಗಲೇ ಈ ಪಂದ್ಯಾವಳಿಯಲ್ಲಿ ಭಾಗವಹಿಸಲು 60 ತಂಡಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳನ್ನೊಳಗೊಂಡ 8 ತಂಡಗಳು ಸೇರಿ ಒಟ್ಟು 68 ತಂಡಗಳು ನೋಂದಣಿ ಮಾಡಿಸಿಕೊಂಡಿವೆ. ಶಾಸಕ ಶರತ್ ಬಚ್ಚೇಗೌಡರ ಜನ್ಮದಿನದ ಅಂಗವಾಗಿ ಎಸ್‌ಬಿಜಿ ಕ್ರಿಕೆಟ್ ಚಾಂಪಿಯನ್ಸ್ ಕಪ್ ವಿಜೇತ ತಂಡಕ್ಕೆ ಪ್ರಥಮ ಬಹುಮಾನವಾಗಿ 3 ಲಕ್ಷ ,ದ್ವಿತಿಯ ಬಹುಮಾನವಾಗಿ 1.5 ಲಕ್ಷ ಹಾಗೂ ತೃತೀಯ ಬಹುಮಾನ 75 ಸಾವಿರ ನೀಡಲಿದ್ದಾರೆ. ಇದರ ಜೊತೆಗೆ ಮ್ಯಾನ್ ಆಫ್ ದ ಮ್ಯಾಚ್, ಸೇರಿದಂತೆ ವಿವಿಧ ಹಂತ ಬಹುಮಾನಗಳನ್ನು ನೀಡಲಾಗುವುದು ಎಂದರು.

ಹಿರಿಯ ಮುಖಂಡ ಬಿ.ಎನ್ ಗೋಪಾಲಗೌಡರು ಮಾತನಾಡಿ ಕ್ರೀಡೆಗಳಲ್ಲಿ ಯುವಕರು ಹೆಚ್ಚಾಗಿ ಭಾಗವಹಿಸುವುದರಿಂದ ದೈಹಿಕ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಮನೋಬಲ ಹೆಚ್ಚಳವಾಗುತ್ತದೆ. ಒಂದಲ್ಲವೊAದು ಕ್ರೀಡೆಯಲ್ಲಿ ನಾವೆಲ್ಲ ತೊಡಗಿಸಿಕೊಳ್ಳಬೇಕು. ಈ ಪಂದ್ಯಾವಳಿಯಲ್ಲಿ ಸೋಲು, ಗೆಲುವಿಗಿಂತ ಆಟದಲ್ಲಿ ಭಾಗವಹಿಸುವುದು ಮುಖ್ಯ ಎಂಬುದು ನಿಮ್ಮೆಲ್ಲರ ದೇಯ್ಯವಾಗಿರಲಿ ಎಂದರು.

ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾಗವಹಿಸುವ ತಂಡ ಆಟಗಾರರಿಗೆ ಜರ್ಸಿ(ಸಮವಸ್ತ್ರ) ವಿತರಿಸಲಾಯಿತು. ಸಮಸ್ತ ಫೌಂಡೇಷನ್ ಸಂಸ್ಥಾಪಕಿ ಪ್ರತಿಭಾ ಶರತ್ ಬಚ್ಚೇಗೌಡ,ಎಸ್ ಬಿಜಿ ತಂಡದ ಪದಾಧಿಕಾರಿಗಳು,ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಹಾಜರಿದ್ದರು

ಫೋಟೋ: ಹೊಸಕೋಟೆಯಲ್ಲಿ ಡಿ.12 ಮತ್ತು 14 ರಂದು ನಡೆಯಲಿರುವ ಎಸ್‌ಬಿಜಿ ಕ್ರಿಕೆಟ್ ಚಾಂಪಿಯನ್ಸ್ ಕಪ್ ಪಂದ್ಯಾವಳಿಯ ಆಟಗಾರರಿಗೆ ಜರ್ಸಿ(ಸಮವಸ್ತ್ರ)ಗಳನ್ನು ಮಾಜಿ ಸಂಸದ ಬಿ.ಎನ್

## ಸಾರ್ವಜನಿಕರ ಮನವಿಗೆ ಕ್ಯಾರೆ ಕ್ಯಾರೆ ಎನ್ನದ ಪಿಡಿಒ ಅಧಿಕಾರಿ



**ಚಿತ್ರದುರ್ಗ**: ಮೇಡಂ ನಮ್ಮ ಕಾಲೋನಿಗೆ ಬನ್ನಿ ಇಲ್ಲಿನ ಸಮಸ್ಯೆಗಳು ನಿಮ್ಮ ಕಣ್ಣೆದುರಿಗೆ ಕಾಣುತ್ತಿವೆ. ಇವುಗಳನ್ನು ಸರಿಪಡಿಸಿ ನಮ್ಮ ಹಟ್ಟಿಯಲ್ಲಿ ಉತ್ತಮ ಪರಿಸರವನ್ನು ನಿರ್ಮಾಣ ಮಾಡಿಕೊಡಿ ಎಂದು ಗೋಖರೆದರೂ ಕೂಡ ಪಿಡಿಒ ಅಧಿಕಾರಿ ಮಾತ್ರ ಕ್ಯಾರೆ ಎನ್ನುತ್ತಿಲ್ಲ ಎನ್ನುವುದು ಗ್ರಾಮಸ್ಥರ ಆರೋಪವಾಗಿದೆ.

ಚಿತ್ರದುರ್ಗ ತಾಲೂಕಿನ ಬೇಡರ ಶಿವನಕೆರೆ ಗ್ರಾಮದ ಮಾದಿಗರಹಟ್ಟಿಯಲ್ಲಿ ಸ್ವಚ್ಛತೆ ಎಂಬುದು ಮರೀಚಿಕೆಯಾಗಿದೆ. ಮನೆಯ ಹಿಂಭಾಗ ಮತ್ತು ಮುಂಭಾಗದಲ್ಲಿ ಚರಂಡಿಗಳು ಇಲ್ಲದೆ ಕೊಳಚೆ ನೀರೆಲ್ಲ ಜನ ಓಡಾಡುವ ರಸ್ತೆಯಲ್ಲಿ ಹರಿಯುತ್ತಿದೆ, ಬ್ಯಾಲಹಾಳ್ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಸ್ಮ ಅವರನ್ನ ಗ್ರಾಮಸ್ಥರು ಮಾಹಿತಿಯನ್ನು ಕೇಳಿದಾಗ ಅಸಡ್ಡೆ ಉತ್ತರಗಳನ್ನು ಹೇಳುತ್ತಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ.

ಕಾಲೋನಿಯಲ್ಲಿ ಕಣ್ಣು ಆಯಸಿದ ಕಡೆಯಲಲ್ಲ ಕೊಳಕು ತುಂಬಿರುವ ಜಾಗಗಳೇ ಎದ್ದು ಕಾಣುತ್ತಿವೆ ಇವುಗಳ ಅಕ್ಕಪಕ್ಕದಲ್ಲಿ ಗಿಡ ಗೆಟೆಗಳು ಬೆಳೆದು ಕಾಡಂತಾಗಿದೆ. ಇದರಿಂದಾಗಿ ವಿಷ ಜಂತುಗಳು ಮನೆಗೆ ನುಗ್ಗುತ್ತಿವೆ, ಕಾಲೋನಿಯಲ್ಲಿ ಸರಿಯಾದ ಚರಂಡಿ ವ್ಯವಸ್ಥೆ ಇಲ್ಲದೆ ಕೊಚ್ಚೆ ನೀರೆಲ್ಲ ಮನೆಗಳ ಮುಂದೆ ನಿಲ್ಲುತ್ತಿದೆ ಇದರಿಂದಾಗಿ ಡೆಂಗ್ಯೂ, ಮಲೇರಿಯಾ, ರೋಗಗಳಿಗೆ ಜನರ ತುತ್ತಾಗುತ್ತಿದ್ದಾರೆ.

ಗ್ರಾಮದಲ್ಲಿ ಜೆಜಿಎಂ ಕೆಲಸ ಅರ್ಧಂಬರ್ಧ ಮಾಡಿದ್ದಾರೆ ಇದರಿಂದಾಗಿ ಅಲ್ಲಲ್ಲಿ ಕುಡಿಯುವ ನೀರಿನ ಪೈಪ್ ಗಳು ಒಡೆದು ಹೋಗಿವೆ. ಕುಡಿಯುವ ನೀರಿನ ಪೈಪ್ನಲ್ಲಿ ಚರಂಡಿ ನೀರು ಸೇರಿ ಮನುಷ್ಯನ ದೇಹವನ್ನು ಸೇರುತಿದೆ. ಕುಡಿಯುವ ನೀರಿನ ಸಮಸ್ಯೆಯಂತೂ ಪ್ರಮುಖವಾಗಿ ದಿನನಿತ್ಯ ಎದರಿಸುತ್ತಿದ್ದೇವೆ. ಮಳೆಗಾಲದಲ್ಲಿ ಹೇಗೂ ನಡೆಯಿತು ಆದರೆ ಬೇಸಿಗೆಗಾಲ ಆರಂಭವಾಗುತ್ತಿದೆ ಇನ್ನು ಮುಂದೆ ನೀರಿಲ್ಲದೆ ಸಾಯುವಂತ ಪರಿಸ್ಥಿತಿ ನಿರ್ಮಾಣಗೊಳ್ಳುತ್ತದೆ. ಬೀಡುವ ನೀರು ಗಲೀಜಾಗಿ ಬರುತ್ತಿವೆ, ಒಡೆದ ಪೈಪುಗಳನ್ನ ಸರಿಯಾಗಿ ದುರಸ್ತಿ ಮಾಡದೆ ಪಂಚಾಯತಿ ಸಿಬ್ಬಂದಿಗಳು ನಿರ್ಲಕ್ಷ್ಮ ವಹಿಸುತ್ತಿದ್ದಾರೆ, ಅನಿವಾರ್ಯ ಗಲೀಜು ನೀರನ್ನು ಕುಡಿಯಬೇಕಿದೆ ಎಂದು ಗ್ರಾಮಸ್ಥ



ವಿ.ನಾಗರಾಜ್ ತಿಳಿಸಿದ್ದಾರೆ.

**ದಲಿತರ ಕಾಲೋನಿಗಳನ್ನು ಅಭಿವೃದ್ಧಿಪಡಿಸುವಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ. ನಾವು ಎಷ್ಟು ಬಾರಿ ಮನವಿ ಮಾಡಿದರು ಸಹ ಅಧಿಕಾರಿ ನಮ್ಮ ಮನವಿಗೆ ಸ್ಪಂದಿಸುತ್ತಿಲ್ಲ, ಶುದ್ಧವಾದ ನೀರು ಕೂಡ ನಮಗೆ ಸಿಗುತ್ತಿಲ್ಲ ಕಲುಷಿತ ನೀರಿನಿಂದಲೇ ದಿನನಿತ್ಯ ಆಹಾರ ಮಾಡಿಕೊಂಡು ಸೇವಿಸುತ್ತಿದ್ದೇವೆ.**

**ಗ್ರಾಮ ಪಂಚಾಯತಿಯ ಅಧಿಕಾರಿಗಳಿಗೆ ಚರಂಡಿ, ಕುಡಿಯುವ ನೀರಿಗೆ ಮತ್ತು ಸ್ವಚ್ಛತೆಗೆ ಸಂಬಂಧಿಸಿದಂತೆ ಮಾರ್ಗದರ್ಶನವನ್ನು ನೀಡಲಾಗುವುದು. ಅಲ್ಲಿನ ಸಮಸ್ಯೆಯನ್ನು ಆಲಿಸಿ ಸೂಕ್ತ ಪರಿಹಾರವನ್ನು ಕಲ್ಪಿಸಿಕೊಡಲಾಗುವುದು**

**ಹಟ್ಟಿಯಲ್ಲಿ ಸಾಂಕ್ರಾಮಿಕ ರೋಗ ಹರಡುವ ಭೀತಿ**

ಚರಂಡಿ ನೀರು ಆ ರಸ್ತೆಯಲ್ಲಿ ಹರಿದು ಸಂಕ್ರಾಮಿಕ ರೋಗ ಹರಡುವ ಭೀತಿ ಎದುರಾಗಿದೆ, ಎಸ್ಸಿ ಕಾಲೋನಿಯ ಹಟ್ಟಿಯಲ್ಲಿ ಒಂದು ಚರಂಡಿ ಇಲ್ಲದೆ ಇರುವುದರಿಂದ ಕಲುಷಿತ ನೀರು ಚರಂಡಿಯ ತುಂಬ ತುಂಬಿಕೊಂಡು ರಸ್ತೆಯ ಮೇಲೆ ಹರಿಯುತ್ತಿದೆ, ಕಲುಷಿತಗೊಂಡ ನೀರು ರಸ್ತೆ ಮೇಲೆ ಹರಿಯುತ್ತಿರುವುದರಿಂದ ಮಕ್ಕಳು ಮತ್ತು ವಯಸ್ಕರು ಕಲುಷಿತ ನೀರನ್ನ ತುಳಿದುಕೊಂಡು ಶಾಲೆಗೆ ಮನೆ ಹೋಗುವಂತಾಗಿದೆ ಇದರಿಂದಾಗಿ ಸಾಂಕ್ರಾಮಿಕ ರೋಗ ಹರಡುವ ಭೀತಿ ಗ್ರಾಮಸ್ಥರಲ್ಲಿ ಮನೆ ಮಾಡಿದೆ.

## ದಶಕಗಳು ಕಳೆದರೂ ಮೈಲಾಪುರ ದಲಿತರಿಗೆ ಧಕ್ಕದ ಸವಲತ್ತುಗಳು



**ಹೊಸಕೋಟೆ:** ತಾಲೂಕಿನ ಜಡಿಗೇನಹಳ್ಳಿ ಹೋಬಳಿಯ ಮೈಲಾಪುರ ಗ್ರಾಮದಲ್ಲಿರುವ ದಲಿತ ಸಮುದಾಯಕ್ಕೆ ಹಲವಾರು ದಶಕಗಳಿಂದ ಸಿಗಬೇಕಾದ ಸವಲತ್ತುಗಳು ಧಕ್ಕುತ್ತಿಲ್ಲ. ಇದರಿಂದ ದಲಿತರು ಪರಿತಪಿಸುವಂತಾಗಿದೆ ಎಂದು ಜಾಂಭವ ಯುವ ಸೇನಾ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ.ರಮೇಶ್ ಚಕ್ರವರ್ತಿ ತಿಳಿಸಿದರು.

ನಗರದ ತಾಲೂಕು ಕಚೇರಿ ಆವರಣದಲ್ಲಿ ಮೈಲಾಪುರ ಗ್ರಾಮದ ದಲಿತರ ಸಮಸ್ಯೆಗಳ ಪರಿಹಾರಕ್ಕಾಗಿ ಹಮ್ಮಿಕೊಂಡಿದ್ದ ತಮಟೆ ಚಳುವಳಿ ವೇಳೆ ಮಾತನಾಡಿದರು. ದೇಶಕ್ಕೆ ಸ್ವಾತಂತ್ರ್ಯ ಬಂದ ದಿನದಿಂದಲೂ ದಲಿತರು ತಮ್ಮ ಸವಲತ್ತುಗಳಿಗಾಗಿ ಹೋರಾಟ ಮಾಡುವ ಅನಿವಾರ್ಯತೆ ಎದುರಾಗಿದೆ. ಪ್ರಮುಖವಾಗಿ ರಾಜಕೀಯ ಮಾಡುವ ರಾಜಕಾರಣಿಗಳು ಸಹ ದಲಿತರ ಅಭಿವೃದ್ಧಿಗೆ ಮುಂದಾಗಿಲ್ಲ. ನಮ್ಮಿಂದ ಮತ ಪಡೆದು ಗೆದ್ದು ಅಧಿಕಾರ ಮಾಡುವ ಶಾಸಕರು, ಸಚಿವರಲ್ಲಿ ನಾವು ಯಾವುದೇ ರೀತಿಯ ರಾಜಕೀಯ ಸ್ಥಾನಮಾನ ಕೇಳಲ್ಲ.

ಆದರೆ ಕೇಳುವ ಮೂಲಭೂತ ಸೌಕರ್ಯಗಳನ್ನು ಸಹ ಕಲ್ಪಿಸುವ ಗೋಜಿಗೆ ಹೋಗಲ್ಲ. ಮೈಲಾಪುರ ಗ್ರಾಮದಲ್ಲಿ ದಲಿತರಿಗೆ ವಸತಿ ಯೋಜನೆ ಹಕ್ಕುಪತ್ರ ಕೊಟ್ಟಿಲ್ಲ. ಸಮುದಾಯಕ್ಕೆ ರುದ್ರಭೂಮಿ ಇಲ್ಲ, ಅಂಬೇಡ್ಕರ್ ಭವನ ಇಲ್ಲ. ಮುಖ್ಯವಾಗಿ ಸರ್ವೆ ನಂಬರ್ 5/1ರಲ್ಲಿ ಏಳು ಗುಂಟೆ ಗೋಮಾಳ ಜಮೀನಿದ್ದು ಇದರ ಜೊತೆಗೆ 1 ಎಕರೆ ಪ್ರದೇಶವನ್ನು ಸೇರಿಸಿ ಸಮುದಾಯ ಭವನ, ರುದ್ರಭೂಮಿಗೆ ಅವಕಾಶ ಕಲ್ಪಿಸಿಕೊಡಬೇಕು ಎಂದರು. ಒಂದು ವೇಳೆ 15 ದಿನದಲ್ಲಿ ನಮ್ಮ ಮನವಿಗೆ ಅಧಿಕಾರಿಗಳು ಸ್ಪಂದಿಸದಿದ್ದರೆ ತಾಲೂಕು ಕಚೇರಿ ಎದುರು ಉಪವಾ ಸತ್ಯಾಗ್ರಹ ಮಾಡುವುದಾಗಿ ಎಚ್ಚರಿಕೆಯನ್ನು ನೀಡಿದರು.

ಮಹದೇವಪುರ ಕ್ಷೇತ್ರದ ತಾಲೂಕು ಅಧ್ಯಕ್ಷ ಕುಮಾರ್, ಹೊಸಕೋಟೆ ತಾಲೂಕು ಕಾರ್ಯದರ್ಶಿ ಸಂತೋಷ್, ಪದಧಿಕಾರಿಗಳಾದ ವಿಜಯ್, ವೇಮಗಲ್ ಗುರು, ವೇಮಗಲ್ ನರಸಿಂಹಮೂರ್ತಿ, ಮುನಿಯಪ್ಪ, ವಿಜಯಪುರ ಶಿವಪ್ಪ, ನೆಲಮಂಗಲ ಪಧಾದಿಕಾರಿಗಳು ಹಾಜರಿದ್ದರು.

ಫೋಟೋ: ಹೊಸಕೋಟೆ ತಾಲೂಕಿನ ಮೈಲಾಪುರ ಗ್ರಾಮದ ದಲಿತರಿಗೆ ವಸತಿ ಹಕ್ಕುಪತ್ರ ಹಾಗೂ ರುದ್ರಭೂಮಿಗೆ ಜಮೀನು ಮಂಜೂರಾತಿಗೆ ಆಗ್ರಹಿಸಿ ಜಾಂಭವ ಯುವ ಸೇನೆ ರಾಜ್ಯಾಧ್ಯಕ್ಷ ಡಾ.ರಮೇಶ್ ಚಕ್ರವರ್ತಿ ತಮಟೆ ಚಳುವಳಿ ನಡೆಸಿ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

## ಕುರಿ ತೊಳೆಯುತ್ತಿದ್ದ ಇಬ್ಬರು ಯುವಕರು ಚೆಕ್ ಡ್ಯಾಂನಲ್ಲಿ ಮುಳುಗಿ ಸಾವು



ಚಿತ್ರದುರ್ಗ: ಸ್ಥಳೀಯರನ್ನು ಶೋಕಕ್ಕೆಗುಳಿಸಿರುವ ದುರಂತ ಘಟನೆ ಚಿತ್ರದುರ್ಗ ತಾಲೂಕಿನ ಜಿ.ಆರ್ ಹಳ್ಳಿ ಗ್ರಾಮದಲ್ಲಿ ನಡೆದಿದೆ. ಕುರಿಗಳನ್ನು ತೊಳೆಯುವ ಸಲುವಾಗಿ ಗ್ರಾಮ ಸಮೀಪದ ಚೆಕ್ ಡ್ಯಾಂಗೆ ತೆರಳಿದ್ದ ಇಬ್ಬರು ಯುವಕರು ನೀರಿನಲ್ಲಿ ಮುಳುಗಿ ದುರ್ಮರಣ ಹೊಂದಿದ್ದಾರೆ. ಈ ಘಟನೆ ಗ್ರಾಮದಲ್ಲಿ ತೀವ್ರ ದುಗುಡ ಮತ್ತು ಆಕ್ರಂದನಕ್ಕೆ ಕಾರಣವಾಗಿದೆ

ಮೃತರಾದವರು ವಿಶ್ವನಾಥ್ (23) ಹಾಗೂ ಮಾರುತಿ (19) ಎಂದು ಗುರುತಿಸಲಾಗಿದೆ. ಇಬ್ಬರೂ ಗ್ರಾಮದವರಾಗಿದ್ದು, ಪ್ರತಿದಿನದಂತೆ ತಮ್ಮ ಕುರಿಗಳನ್ನು ತೊಳೆಯಲು ಜಿ.ಆರ್ ಹಳ್ಳಿ ಬಳಿಯಿರುವ ಚೆಕ್ ಡ್ಯಾಂ ಪ್ರದೇಶಕ್ಕೆ ತೆರಳಿದ್ದರು. ಈ



ವೇಳೆ ಜಾರಿ ಅಥವಾ ನೀರಿನ ಆಳವನ್ನು ಅಂದಾಜು ಮಾಡದೇ ಡ್ಯಾಂ ಒಳಗೆ ಹೋಗಿರುವ ಸಂದರ್ಭದಲ್ಲಿ ಇಬ್ಬರೂ ನೀರಿನಲ್ಲಿ ಸಿಲುಕಿ ಹೊರಬರಲು ಯತ್ನಿಸಿದರೂ, ಅವರಿಗೆ ಈಜು ಬಾರದಿರುವುದರಿಂದ ನೀರಿನ ಪ್ರವಾಹದಿಂದ ತಪ್ಪಿಸಿಕೊಳ್ಳಲಾಗದೆ ಮುಳುಗಿ ಸಾವನ್ನಪ್ಪಿದ್ದಾರೆ.

ಘಟನೆಯಾಗುತ್ತಿದ್ದಂತೆಯೇ ಸ್ಥಳೀಯರು ಯುವಕರನ್ನು ರಕ್ಷಿಸಲು ಪ್ರಯತ್ನಿಸಿದರೂ, ನೀರಿನ ಆಳ ಮತ್ತು ಜಾರು ಬದಿಗಳ ಕಾರಣದಿಂದ ಅವರನ್ನು ತಕ್ಷಣವಾಗಿ ಮೇಲಕ್ಕೆ ತರಲಾಗಲಿಲ್ಲ. ನಂತರ ದೇಹಗಳನ್ನು ಹೊರತೆಗೆದು ಆಸ್ಪತ್ರೆಗೆ ಸಾಗಿಸಿದಾಗ, ಇಬ್ಬರೂ ಈಗಾಗಲೇ ಮೃತಪಟ್ಟಿರುವುದು ದೃಢಪಟ್ಟಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಮೋದಿ-ಟ್ರಂಪ್ ಮಾತುಕತೆ ನಂತರ: ಭಾರತ-ಅಮೆರಿಕಾ ವ್ಯಾಪಾರ ಒಪ್ಪಂದಕ್ಕೆ ವೇಗ



**ನವದೆಹಲಿ**: ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಭಾರತ ಭೇಟಿಯ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದೀರ್ಘ ದೂರವಾಣಿ ಸಂಭಾಷಣೆ ನಡೆಸಿದ್ದಾರೆ. ಡಿಸೆಂಬರ್ 11ರಂದು ನಡೆದ ಈ ಸಂಭಾಷಣೆಯು ಪುಟಿನ್ ಅವರ ಡಿಸೆಂಬರ್ 4-5ರ ಭೇಟಿಯ ನಂತರದ ಮೊದಲ ಮೋದಿ-ಟ್ರಂಪ್ ಸಂಪರ್ಕವಾಗಿದೆ. ಉಭಯ ನಾಯಕರು ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯ ಪ್ರಗತಿಯನ್ನು ಪರಿಶೀಲಿಸಿ, ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ಮೋದಿ ಅವರು ತಮ್ಮ ಎಕ್ಸ್ (ಟ್ವಿಟರ್) ಖಾತೆಯಲ್ಲಿ ಪೋಸ್ಟ್ ಮಾಡಿ, "ಅಮೆರಿಕ ಅಧ್ಯಕ್ಷ ಟ್ರಂಪ್ ಅವರೊಂದಿಗೆ ಬಹಳ ಆತ್ಮೀಯ ಮತ್ತು ಅದ್ಭುತ ಸಂಭಾಷಣೆ ನಡೆಸಿದೆ. ನಾವು ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದೆವು ಮತ್ತು ಪ್ರಾದೇಶಿಕ ಹಾಗೂ ಅಂತಾರಾಷ್ಟ್ರೀಯ ಬೆಳವಣಿಗೆಗಳ ಬಗ್ಗೆ ಚರ್ಚಿಸಿದೆವು. ಜಾಗತಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗಾಗಿ ಭಾರತ ಮತ್ತು ಅಮೆರಿಕ ಒಟ್ಟಾಗಿ ಕೆಲಸ ಮಾಡುತ್ತವೆ" ಎಂದು ತಿಳಿಸಿದ್ದಾರೆ. ಪುಟಿನ್ ಅವರ ಭೇಟಿಯು ಭಾರತ-ರಷ್ಯಾ ಸಂಬಂಧಗಳನ್ನು ಬಲಪಡಿಸಿದ್ದು, ಆರ್ಥಿಕ ಸಹಕಾರ ಕಾರ್ಯಕ್ರಮವನ್ನು 2030ರವರೆಗೆ ವಿಸ್ತರಿಸುವ ಒಪ್ಪಂದಕ್ಕೆ ಸಹಿ ಹಾಕಲಾಗಿದೆ.

ಈ ಹಿನ್ನೆಲೆಯಲ್ಲಿ ಮೋದಿ-ಟ್ರಂಪ್ ಸಂಭಾಷಣೆಯು ವಿಶೇಷ ಮಹತ್ವ ಪಡೆದಿದೆ. ಏಕೆಂದರೆ ಅಮೆರಿಕದಲ್ಲಿ ಟ್ರಂಪ್ ಆಡಳಿತವು ಭಾರತದ ರಷ್ಯಾ ತೈಲ ಖರೀದಿಗೆ ಸಂಬಂಧಿಸಿದಂತೆ ಹೆಚ್ಚುವರಿ ಸುಂಕಗಳನ್ನು ವಿಧಿಸಿ, ವ್ಯಾಪಾರ ಒಪ್ಪಂದಗಳಲ್ಲಿ ಒತ್ತಡ ಹೇರಿದೆ.

ಸಂಭಾಷಣೆಯಲ್ಲಿ ಉಭಯ ನಾಯಕರು ದ್ವಿಪಕ್ಷೀಯ ವ್ಯಾಪಾರವನ್ನು ಹೆಚ್ಚಿಸುವ ಬಗ್ಗೆ ಒತ್ತು ನೀಡಿದರು. ಭಾರತ-ಅಮೆರಿಕ ವ್ಯಾಪಾರ ಚರ್ಚೆಗಳು ಪ್ರಗತಿಯಲ್ಲಿದ್ದು, ಟ್ರಂಪ್ ಆಡಳಿತದಿಂದ ಭಾರತಕ್ಕೆ ವಿಧಿಸಲಾದ ಸುಂಕಗಳನ್ನು ಕಡಿಮೆ ಮಾಡುವ ನಿರೀಕ್ಷೆಯಿದೆ. ಇದಲ್ಲದೆ, ಇಂಧನ ಕ್ಷೇತ್ರದಲ್ಲಿ ಸಹಕಾರವನ್ನು ಬಲಪಡಿಸುವುದು, ರಕ್ಷಣೆ ಮತ್ತು ಭದ್ರತೆ, ತಂತ್ರಜ್ಞಾನ ಹಾಗೂ ವಾಣಿಜ್ಯ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ಹೆಚ್ಚಿಸುವ ಬಗ್ಗೆ ಚರ್ಚೆ ನಡೆದಿದೆ. ಭಾರತವು ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುತ್ತಿರುವುದು ಅಮೆರಿಕಕ್ಕೆ ಕಳವಳ ತಂದಿದ್ದು, ಆದರೆ ಭಾರತವು ತನ್ನ ಇಂಧನ ಭದ್ರತೆಯನ್ನು ಆದ್ಯತೆಯಾಗಿ ಇಟ್ಟುಕೊಂಡಿದೆ.

ರಷ್ಯಾದೊಂದಿಗೆ ಬಲವಾದ ಸಂಬಂಧವನ್ನು ಕಾಯ್ದುಕೊಂಡು ಅಮೆರಿಕದೊಂದಿಗೂ ಸಹಕಾರವನ್ನು ವಿಸ್ತರಿಸುವುದು ಭಾರತದ ತಂತ್ರವಾಗಿದೆ. ಪುಟಿನ್ ಭೇಟಿಯ ಸಂದರ್ಭದಲ್ಲಿ ಭಾರತ-ರಷ್ಯಾ ನಡುವೆ ಆರ್ಥಿಕ ಸಹಕಾರವನ್ನು 100 ಬಿಲಿಯನ್ ಡಾಲರ್‌ಗೆ ತಲುಪಿಸುವ ಗುರಿ ಹೊಂದಲಾಗಿದೆ. ಮೋದಿ-ಟ್ರಂಪ್ ಸಂಭಾಷಣೆಯು ಈ ಎಲ್ಲಾ ಬೆಳವಣಿಗೆಗಳ ನಂತರ ನಡೆದಿದ್ದು, ಭಾರತವು ಯಾವುದೇ ಒತ್ತಡಕ್ಕೂ ಬಗ್ಗದೆ ತನ್ನ ಹಿತಾಸಕ್ತಿಗಳನ್ನು ಕಾಯ್ದುಕೊಳ್ಳುತ್ತದೆ ಎಂಬ ಸಂದೇಶ ನೀಡಿದೆ. ಉಭಯ ನಾಯಕರು ಎಲ್ಲಾ ಕ್ಷೇತ್ರಗಳಲ್ಲಿ ನಿರಂತರ ಸಹಕಾರವನ್ನು ಬಲಪಡಿಸುವ ಬಗ್ಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಅನಾಥ ಮಕ್ಕಳ ಅದ್ಧೂರಿ ವಿವಾಹ; ಜಿಲ್ಲಾಧಿಕಾರಿಯೇ ಮಾಡಿದ್ರು ಕನ್ಯಾದಾನ

**ಉಡುಪಿ:** ಅನಾಥ ಹೆಣ್ಣು ಮಕ್ಕಳ ಅದ್ಧೂರಿ ವಿವಾಹಕ್ಕೆ ಉಡುಪಿಯ ರಾಜ್ಯ ಮಹಿಳಾ ನಿಲಯ ಸಾಕ್ಷಿಯಾಗಿದೆ. ಜಿಲ್ಲಾಡಳಿತ ನೇತೃತ್ವದಲ್ಲಿ ಇಬ್ಬರ ವಿವಾಹ ಕಾರ್ಯಕ್ರಮ ನೆರವೇರಿದ್ದು, ಜಿಲ್ಲಾಧಿಕಾರಿಯೇ ಮುಂದೆ ನಿಂತು ಕನ್ಯಾದಾನ ಮಾಡಿದ್ದು ವಿಶೇಷವಾಗಿತ್ತು. ಆ ಮೂಲಕ ರಾಜ್ಯ ಮಹಿಳಾ ನಿಲಯದಲ್ಲಿ ಈವರೆಗೆ ನೆರವೇರಿದ ಮದುವೆಗಳ ಸಂಖ್ಯೆ 25ರ ಗಡಿ ತಲುಪಿತು.

ಕಿವಿ ಕೇಳಿಸದ, ಮಾತು ಬಾರದ ಅನಾಥ ಯುವತಿಯ ಬಾಳಿಗೆ ಹಾಸನದ ಕೃಷಿಕ ಬೆಳಕಾಗಿ ಬಂದರೆ, ವಿವಾಹವಾದ ಮತ್ತೋರ್ವ ಯುವತಿ ಈಗ ಅಂತಿಮ ವರ್ಷದ ಪದವಿ ವಿದ್ಯಾರ್ಥಿನಿ. ಎಂಕಾಂ ಮಾಡಿ ಖಾಸಗಿ ಕಂಪನಿಯಲ್ಲಿ ಉದ್ಯೋಗದಲ್ಲಿರುವ ಯುವಕನ ಜೊತೆ ಈಕೆ ಸಪ್ತ ಪದಿ ತುಳಿ ದಿದ್ದು, ಆ ಕೆಯ ಮುಂದಿನ ಓದಿನ ಜವಾಬ್ದಾರಿಯನ್ನೂ ಆತ ಹೊತ್ತಿದ್ದಾನೆ. ವಿದ್ಯಾಭ್ಯಾಸ ಮಾಡುತ್ತಿರುವ ಹುಡುಗಿಗೆ




ಉದ್ಯೋಗಸ್ಥ ಯುವಕನೇ ಬೇಕೆಂದು ಕಾದು ಕುಳಿತು ರಾಜ್ಯ ಮಹಿಳಾ ನಿಲಯ ಮದುವೆ ಮಾಡಿಸಿದೆ. ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ. ಅವರೇ ಮುಂದೆನಿಂತು ಮದುವೆಕಾರ್ಯ ನೆರವೇರಿಸಿದ್ದು, ಕನ್ಯಾದಾನ ಮಾಡಿದ್ದಾರೆ.

ನವ ವಿವಾಹಿತರಿಗೆ ಆರತಿಯನ್ನೂ ಬೆಳಗಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಗಳು ಕೂಡ ಮದುವೆಗೆ ಹಾಜರಾಗಿದ್ದು, ನವ ವಿವಾಹಿತರ ಹೆಸರಿಗೆ 50 ಸಾವಿರ ರೂ. ಹಣ ಡೆಪಾಸಿಟ್ ಕೂಡ ಮಾಡಲಾಗಿದೆ. ಇದು ಸ್ವರ್ಗದಲ್ಲಿ ನಿಶ್ಚಯವಾದ ಮದುವೆ ಎಂದು ನೆರೆದಿದ್ದವರು ಹೇಳಿದ್ದಾರೆ. ಇನ್ನು ಬ್ರಾಹ್ಮಣ ಸಮುದಾಯ ಸೇರಿ ಕೃಷಿಕ ಕುಟುಂಬಗಳ ಯುವಕರಿಗೆ ಮದುವೆಯಾಗಲು ಕನ್ಯೆಯರ ಅಭಾವ ಹಿನ್ನಲೆ ಮದುವೆಗೆ ಕನ್ಯೆಯರಿಗೆ ಆಗ್ರಹಿಸಿ ಉಡುಪಿ ರಾಜ್ಯ ಮಹಿಳಾ ನಿಲಯಕ್ಕೆ ಅತೀ ಹೆಚ್ಚು ಬೇಡಿಕೆ ಬರುತ್ತಿವೆ ಎನ್ನಲಾಗಿದೆ.

ರೈತರ ಮಕ್ಕಳ ಮದುವೆಗೆ ಸಿಗ್ತಿಲ್ಲ ಕನ್ಯೆ: ವಿನೂತನ ಪ್ರತಿಭಟನೆ ರೈತರ ಮಕ್ಕಳು ಮದುವೆಯಾಗಲು ಹೆಣ್ಣು ಕೊಡೋದಕ್ಕೆ ಜನ ಹಿಂದೇಟು ಹಾಕುತ್ತಿರುವ ಹಿನ್ನೆಲೆ ಮಂಡ್ಯದಲ್ಲಿ ಬಿಜೆಪಿ ವಿನೂತನವಾಗಿ ಪ್ರತಿಭಟನೆ ನಡೆಸಿದೆ. ಜಿಲ್ಲೆಯೊಂದರಲ್ಲೇ ಮದುವೆಯಾಗದ ಸಾವಿರಾರು ಯುವಕರು ಇರುವ ಕಾರಣ, ರೈತರ ಮಕ್ಕಳ ಮದುವೆಗಾಗಿ ಪ್ರೋತ್ಸಾಹಧನ ನೀಡಬೇಕೆಂಬ ಆಗ್ರಹ ವ್ಯಕ್ತಪಡಿಸಲಾಗಿದೆ. ವರನಂತೆ ಹಣೆಗೆ ಬಾಸಿಂಗ, ತಲೆಗೆ ಮೈಸೂರು ಪೇಟ ಹಾಕಿಕೊಂಡು ಅಣಕು ಪ್ರದರ್ಶಿಸಿ, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಶಾದಿಭಾಗ್ಯ ಮಾದರಿಯಲ್ಲಿ ರೈತರನ್ನ ಮದುವೆಯಾಗುವ ಯುವತಿಯರಿಗೆ 5 ಲಕ್ಷ ಪ್ರೋತ್ಸಾಹ ಧನ ನೀಡಬೇಕೆಂಬ ಬೇಡಿಕೆ ಇಡಲಾಗಿದೆ

## ಮಾಜಿ ಕೇಂದ್ರ ಗೃಹ ಸಚಿವ ಶಿವರಾಜ್ ಪಾಟೀಲ್ ನಿಧನ



**ಲಾತೂರ್**: ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹ ಸಚಿವ ಶಿವರಾಜ್ ವಿ. ಪಾಟೀಲ್ ಇಂದು (ಡಿ.12) ಬೆಳಿಗ್ಗೆ ತಮ್ಮ 90ನೇ ವಯಸ್ಸಿನಲ್ಲಿ, ಮಹಾರಾಷ್ಟ್ರದ ಲಾತೂರ್‌ನಲ್ಲಿರುವ ತಮ್ಮ ನಿವಾಸ 'ದೇವ್ಘರ್' ನಲ್ಲಿ ನಿಧನರಾಗಿದ್ದಾರೆ.

ಶಿವರಾಜ್ ಪಾಟೀಲ್ ಅಕ್ಟೋಬರ್ 12, 1935 ರಂದು ಜನಿಸಿದರು. ಅವರ ಸಾರ್ವಜನಿಕ ಸೇವೆ ಲಾತೂರ್‌ನ ಪುರಸಭೆಯ ಮುಖ್ಯಸ್ಥರಾಗಿ ಪ್ರಾರಂಭವಾಯಿತು. 1970ರ ದಶಕದ ಆರಂಭದಲ್ಲಿ ಶಾಸಕರಾಗಿ ಆಯ್ಕೆಯಾಗುವ ಮೂಲಕ ರಾಜ್ಯ ರಾಜಕಾರಣಕ್ಕೆ ಪ್ರವೇಶಿಸಿದರು.10ನೇ ಲೋಕಸಭೆಯ ಸ್ಪೀಕರ್ ಆಗಿ ಅವರು ಕಾರ್ಯನಿರ್ವಹಿಸಿದರು. ಈ ಅವಧಿಯಲ್ಲಿ, ಅವರು ಸಂಸತ್ತಿನ ಕಲಾಪಗಳನ್ನು ನಿರ್ವಹಿಸಿದ ರೀತಿ, ನಿಯಮಗಳು ಮತ್ತು ಸಂಪ್ರದಾಯಗಳ ಬಗ್ಗೆ ಅವರಿಗಿದ್ದ ಆಳವಾದ ಜ್ಞಾನಕ್ಕೆ ವಿರೋಧ ಪಕ್ಷದವರೂ ಸಹ ಶಿವರಾಜ್ ಅವರನ್ನು ಗೌರವಿಸುತ್ತಿದ್ದರು ಅವರಿಗಿದ್ದ ಆಳವಾದ ಜ್ಞಾನದಿಂದಾಗಿ, ವಿರೋಧ ಪಕ್ಷಗಳಿಂದಲೂ ಗೌರ ಪಾತ್ರರಾಗಿದ್ದರು. ಡಾ. ಮನಮೋಹನ್ ಸಿಂಗ್ ನೇತೃತ್ವದ ಯುಪಿಎ (UPA) ಸರ್ಕಾರದಲ್ಲಿ ಕೇಂದ್ರ ಗೃಹ ಸಚಿವರಾಗಿ ಸೇವೆ ಸಲ್ಲಿಸಿದರು. ದೇಶದ ಆಂತರಿಕ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ನಿರ್ವಹಿಸುವ ಜವಾಬ್ದಾರಿಯನ್ನು ಅವರು ಸಮರ್ಥವಾಗಿ ನಿಭಾಯಿಸಿದರು. 2010 ರಿಂದ 2015 ರವರೆಗೆ ಪಂಜಾಬ್ ರಾಜ್ಯಪಾಲರಾಗಿ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ಆಡಳಿತಾಧಿಕಾರಿಯಾಗಿ ಸೇವೆ ಸಲ್ಲಿಸಿದರು.

ಈ ಸಾಂವಿಧಾನಿಕ ಹುದ್ದೆಗಳಲ್ಲಿ ಅವರ ಪಾತ್ರವು ಪಕ್ಷಾತೀತವಾಗಿತ್ತು. ಲಾತೂರ್ ಲೋಕಸಭಾ ಕ್ಷೇತ್ರದಿಂದ ಬರೋಬ್ಬರಿ ಏಳು ಬಾರಿ ಗೆಲುವು ಸಾಧಿಸಿ, ಸತತವಾಗಿ ಸಂಸತ್ತಿನಲ್ಲಿ ತಮ್ಮ ನೆಲೆಯನ್ನು ಪ್ರತಿನಿಧಿಸಿದರು. ಆದಾಗ್ಯೂ, 2004ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯ ರೂಪಕ್ಕೆ ಪಾಟೀಲ್ ನೀಲಂಗೇಕರ್ ಅವರ ವಿರುದ್ಧ ಅನಿರೀಕ್ಷಿತ ಸೋಲು ಕಂಡರು. ಈ ಸೋಲು ತಾತ್ಕಾಲಿಕವಾಗಿದ್ದರೂ, ಅವರು ಪಕ್ಷದ ಮತ್ತು ರಾಷ್ಟ್ರದ ಸೇವೆಯನ್ನು ಮುಂದುವರೆಸಿದರು.

ಅವರು ಎಂದಿಗೂ ಸಾರ್ವಜನಿಕ ಭಾಷಣಗಳಲ್ಲಿ ಅಥವಾ ಖಾಸಗಿ ಸಂಭಾಷಣೆಗಳಲ್ಲಿ ವೈಯಕ್ತಿಕ ದಾಳಿಗಳಲ್ಲಿ ಅಥವಾ ಕೆಳಮಟ್ಟದ ರಾಜಕೀಯದಲ್ಲಿ ತೊಡಗಲಿಲ್ಲ. ಅವರ ಪ್ರತಿಯೊಂದು ಮಾತು ಮತ್ತು ನಡತೆಯು ಗೌರವಯುತವಾಗಿರುತ್ತಿತ್ತು ಎಂದು ಪಕ್ಷದ ಹಿರಿಯ ನಾಯಕರೊಬ್ಬರು ಹೇಳಿದ್ದರು. ಶಿವರಾಜ್ ಪಾಟೀಲ್ ಅವರು ತಮ್ಮ ಮಗ ಶೈಲೇಶ್ ಪಾಟೀಲ್, ಸೊಸೆ ಮತ್ತು ಬಿಜೆಪಿ ನಾಯಕಿ ಅರ್ಚನಾ ಪಾಟೀಲ್ ಮತ್ತು ಇಬ್ಬರು ಮೊಮ್ಮಕ್ಕಳನ್ನು ಅಗಲಿದ್ದಾರೆ. ಅವರ ನಿಧನಕ್ಕೆ ದೇಶಾದ್ಯಂತ ರಾಜಕೀಯ ನಾಯಕರು, ಗಣ್ಯರು ಮತ್ತು ಅವರ ಅಭಿಮಾನಿಗಳು ತೀವ್ರ ಸಂತಾಪ ಸೂಚಿಸಿದ್ದಾರೆ. ಅವರ ನಿಧನವು ಭಾರತೀಯ ರಾಜಕೀಯಕ್ಕೆ ಮತ್ತು ಸಂಸದೀಯ ಪರಂಪರೆಗೆ ದೊಡ್ಡ ನಷ್ಟವಾಗಿದೆ. ಇವರ ಅಂತಿಮ ಸಂಸ್ಕಾರವು ಲಾತೂರ್‌ನಲ್ಲಿ ಪೂರ್ಣ ರಾಜ್ಯ ಗೌರವಗಳೊಂದಿಗೆ ನಡೆಯುವ ನಿರೀಕ್ಷೆಯಿದೆ.

## ಚಿಂತೂರು ಘಾಟ್‌ನಲ್ಲಿ ಕಂದಕಕ್ಕೆ ಉರುಳಿದ ಬಸ್, 10ಕ್ಕೂ ಹೆಚ್ಚು ಮಂದಿ ಸಾ ವು

**ವಿಜಯವಾಡ**: ಆಂಧ್ರಪ್ರದೇಶದ ಅಲ್ಲೂರಿ ಸೀತಾರಾಮ ರಾಜು ಜಿಲ್ಲೆಯಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಯಾತ್ರಾರ್ಥಿಗಳನ್ನು ಕರೆದೊಯ್ಯುತ್ತಿದ್ದ ಖಾಸಗಿ ಪ್ರಯಾಣಿಕ ಬಸ್ ನಿಯಂತ್ರಣ ತಪ್ಪಿ ಚಿಂತೂರು-ಮರೇಡುಮಿಲಿನ ಘಾಟ್ ರಸ್ತೆಯಲ್ಲಿ ಆಳವಾದ ಕಂದಕಕ್ಕೆ ಉರುಳಿದೆ. ಈ ದುರ್ಘಟನೆಯಲ್ಲಿ ಕನಿಷ್ಠ 10 ಜನರು ದಾರುಣವಾಗಿ ಸಾವನ್ನಪ್ಪಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ದುರದೃಷ್ಟಕರ ಘಟನೆಯಲ್ಲಿ ಇಬ್ಬರು ಚಾಲಕರು ಸೇರಿದಂತೆ ಒಟ್ಟು 37 ಜನ ಪ್ರಯಾಣಿಸುತ್ತಿತ್ತು. ಇವರೆಲ್ಲರೂ ಚಿತ್ತೂರು ಜಿಲ್ಲೆಯವರಾಗಿದ್ದು, ಧಾರ್ಮಿಕ ಯಾತ್ರೆ ಕೈಗೊಂಡಿದ್ದರು. ಇತ್ತೀಚೆಗೆ ಅವರು ಪ್ರಸಿದ್ಧ ಭದ್ರಾಚಲಂ ದೇವಾಲಯಕ್ಕೆ ಭೇಟಿ ನೀಡಿದ್ದರು. ಅಲ್ಲಿಂದ ಮತ್ತೊಂದು ಪ್ರಮುಖ ಪುಣ್ಯಕ್ಷೇತ್ರವಾದ ಅನ್ನಾವರಂ (Anna-varam) ಕಡೆಗೆ ಪ್ರಯಾಣಿಸುತ್ತಿದ್ದ ವೇಳೆ ಈ ದುರ್ಘಟನೆ ನಡೆದಿದೆ. ಘಾಟ್ ರಸ್ತೆಯಲ್ಲಿ ಸುಮಾರು 1:30 ರ ಸುಮಾರಿಗೆ ಈ ದುರಂತ ಸಂಭವಿಸಿದೆ. ಪ್ರಾಥಮಿಕ ತನಿಖೆಗಳ ಪ್ರಕಾರ, ಘಟನೆ ನಡೆದ ಸ್ಥಳವು ತುಳಸಿಪಾಕ ಸಮೀಪದ 9ನೇ ಮೈಲಿಗಲ್ಲಿನ ಬಳಿ ಇದೆ. ರಸ್ತೆಯು ಅತ್ಯಂತ ಕಡಿದಾದ ಮತ್ತು ಅಪಾಯಕಾರಿ ತಿರುವುಗಳನ್ನು ಹೊಂದಿದ್ದು, ಚಾಲಕನಿಗೆ ತೀವ್ರವಾದ ವಕ್ರರಸ್ತೆಯನ್ನು ದಾಟಲು ಸಾಧ್ಯವಾಗಿಲ್ಲ. ಬಸ್ ನಿಯಂತ್ರಣ ಕಳೆದುಕೊಂಡು ಮೊದಲು ರಸ್ತೆಯ ಅಂಚಿನಲ್ಲಿದ್ದ ಸುರಕ್ಷತಾ ಗೋಡೆಗೆ ಡಿಕ್ಕಿ ಹೊಡೆದಿದೆ ಮತ್ತು ನಂತರ ಆಳವಾದ ಕಂದಕಕ್ಕೆ ಉರುಳಿದೆ ಎಂದು ಪೊಲೀಸರು ಶಂಕಿಸಿದ್ದಾರೆ.ಅಪಘಾತ ಸಂಭವಿಸಿದ ಸ್ಥಳವು ಬೆಟ್ಟ ಪ್ರದೇಶದಲ್ಲಿದ್ದು, ಇದು ಮೊಬೈಲ್ ನೆಟ್‌ವರ್ಕ್ ಸಂಪರ್ಕದಿಂದ ಸಂಪೂರ್ಣವಾಗಿ ಹೊರಗಿದೆ. ಈ ಕಾರಣದಿಂದಾಗಿ, ತುರ್ತು ಸೇವೆಗಳು ಒದಗಿದಲು ಹೆಚ್ಚು ಸಮಯ ಬೇಕಾಯಿತು. ಇದರಿಂದ ಅಪಘಾತದಲ್ಲಿ ತೀವ್ರ ಸಾವು ನೋವು ಸಂಭವಿಸಿದೆ.

ಸ್ಥಳೀಯ ಅಧಿಕಾರಿಗಳು ಮಾಹಿತಿ ಪಡೆದ ಕೂಡಲೇ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯನ್ನು ಆರಂಭಿಸಿದರು. ಮೊಬೈಲ್ ನೆಟ್‌ವರ್ಕ್ ಇಲ್ಲದ ಕಾರಣ, ರಕ್ಷಣಾ ಕಾರ್ಯಕರ್ತರು ಮತ್ತು ಪೊಲೀಸರು ಸಂಕಷ್ಟದಲ್ಲಿದ್ದ ಪ್ರಯಾಣಿಕರನ್ನು ಹೊರತರಲು ತೀವ್ರ ಕಷ್ಟವಾಗುತ್ತಿದೆ ಎಂದು ತಿಳಿದುಬಂದಿದೆ. ಇಲ್ಲಿಯವರೆಗೆ, ರಕ್ಷಣಾ ತಂಡಗಳು ಅಪಘಾತ ಸ್ಥಳದಿಂದ 9 ಮೃತದೇಹಗಳನ್ನು ಹೊರತೆಗೆದಿವೆ. ಗಂಭೀರವಾಗಿ ಗಾಯಗೊಂಡವರನ್ನು ತಕ್ಷಣವೇ ಚಿಂತೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಗತ್ಯವಿದ್ದಲ್ಲಿ ಗಾಯಾಳುಗಳನ್ನ ಹೆಚ್ಚಿನ ಚಿಕಿತ್ಸೆಗಾಗಿ ನೆರೆಯ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗುತ್ತದೆ. ಗಾಯಗೊಂಡವರಲ್ಲಿ ಹಲವರ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಜಿಲ್ಲಾಡಳಿತದ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

## 'ನನ್ನನ್ನು ಸಿಎಂ ಮಾಡುವುದಾದರೆ ಬಿಜೆಪಿಗೆ ವಾಪಾಸ್ ಹೋಗ್ತೀನಿ': ಯತ್ನಾಳ್ ಹೊಸ ಬಾಂಬ್



**ಬೆಳಗಾವಿ:** ಬಿಜೆಪಿಗೆ ಮರಳಿ ಬರುವುದಾದರೆ ನನ್ನನ್ನು ಮುಖ್ಯಮಂತ್ರಿ ಮಾಡಬೇಕು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ. ಬೆಳಗಾವಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ನಾಯಕರು ತಮ್ಮನ್ನು ಪಕ್ಷಕ್ಕೆ ಮರಳಿ ಆಹ್ವಾನಿಸಿದ್ದಾರೆ ಎಂದು ಬಹಿರಂಗಪಡಿಸಿದರು. ಆದರೆ, ಸರಳವಾಗಿ ಮರಳಿ ಬರುವುದಿಲ್ಲ, ಮುಖ್ಯಮಂತ್ರಿ ಹುದ್ದೆಯ ಭರವಸೆ ನೀಡಿದರೆ ಮಾತ್ರ ಬರುವುದಾಗಿ ತಿಳಿಸಿದರು.

ವಿಧಾನಸಭೆಯಲ್ಲಿ ಸರ್ಕಾರದ ವಿರುದ್ಧ ಧ್ವನಿ ಎತ್ತುತ್ತಾ, ವಿರೋಧ ಪಕ್ಷದ ನಾಯಕರಂತೆ ವರ್ತಿಸುತ್ತಿದ್ದರು. ಬೆಳಗಾವಿ ಅಧಿವೇಶನದಲ್ಲಿ ಅವರು ತಮ್ಮನ್ನು ವಿರೋಧ ಪಕ್ಷದ ನಾಯಕರ ಪಕ್ಕದಲ್ಲಿ ಕುಳ್ಳಿರಿಸಬೇಕು ಎಂದು ಬೇಡಿಕೆ ಇಟ್ಟಿದ್ದರು. ಇದರ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಅವರನ್ನು ಮರಳಿ ಪಕ್ಷಕ್ಕೆ ಸೇರಿಸಿಕೊಳ್ಳುವ ಪ್ರಯತ್ನ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಸ್ವತಃ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಯತ್ನಾಳ್ ಅವರನ್ನು ಚೇಂಬರ್‌ಗೆ ಕರೆದು ಮಾತುಕತೆ ನಡೆಸಿದ್ದಾರೆ ಎಂದು ಅವರೇ ಬಹಿರಂಗಪಡಿಸಿದ್ದಾರೆ.

"ಬಿಜೆಪಿ ಪರಿಸ್ಥಿತಿ ಬಹಳ ಕೆಟ್ಟದಾಗಿದೆ. ನೀವು ಮರಳಿ ಬನ್ನಿ" ಎಂದು ಅಶೋಕ್ ಹೇಳಿದ್ದರಂತೆ. ಆದರೆ, ಯತ್ನಾಳ್ ಅವರು, "ನನ್ನನ್ನು ಮುಖ್ಯಮಂತ್ರಿ ಮಾಡುವುದಾದರೆ ಮಾತ್ರ ಬರುತ್ತೇನೆ. ಇಲ್ಲವಾದರೆ ಸುಮ್ಮನಿರುವುದಿಲ್ಲ, ನಾವೇ ಜೆಸಿಬಿ (ಜನ ಸೇವಾ ಸಮಿತಿ ಬಿಜೆಪಿ?) ಪಕ್ಷ ಕಟ್ಟುತ್ತೇವೆ" ಎಂದು ಹೇಳಿದ್ದಾರೆ.. ಕರ್ನಾಟಕದಲ್ಲಿ ಬಿಜೆಪಿ ಸೋಲಿನ ನಂತರ ನಾಯಕತ್ವ ಬದಲಾವಣೆಯ ಚರ್ಚೆಗಳು ನಡೆಯುತ್ತಿವೆ. ಯತ್ನಾಳ್ ಅವರು ಹಿಂದೂ ಹಿತರಕ್ಷಣೆ ಮತ್ತು ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಸತತವಾಗಿ ಮಾತನಾಡುತ್ತಿದ್ದಾರೆ. ಇತ್ತೀಚೆಗೆ ಸಕ್ಕರೆ ಕಾರ್ಖಾನೆಗಳ ಸಮಸ್ಯೆ, ನಿರುದ್ಯೋಗಿ ಯುವಕರ ಉದ್ಯೋಗ, ಕೆಪಿಎಸ್‌ಸಿ ಸುಧಾರಣೆಗಳ ಬಗ್ಗೆ ಸದನದಲ್ಲಿ ಧ್ವನಿ ಎತ್ತಿದ್ದಾರೆ.

ಬಸನಗೌಡ ಪಾಟೀಲ್ ವಿಜಯಪುರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದ ಅವರು, ಕೇಂದ್ರದಲ್ಲಿ ರೈಲ್ವೆ ಮತ್ತು ಜವಳಿ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಆದರೆ, ಪಕ್ಷದ ಆಂತರಿಕ ವಿವಾದಗಳು ಮತ್ತು ನಾಯಕತ್ವದ ವಿರುದ್ಧದ ಟೀಕೆಗಳಿಂದಾಗಿ ಬಿಜೆಪಿಯಿಂದ ಉಚ್ಚಾಟನೆಗೊಳಗಾಗಿದ್ದರು. ಯತ್ನಾಳ್ ಅವರು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ವಿರುದ್ಧ ಸತತವಾಗಿ ಟೀಕೆಗಳನ್ನು ಮಾಡುತ್ತಾ ಬಂದಿದ್ದರು. ಪಕ್ಷದ ಕರ್ನಾಟಕ ಘಟಕದಲ್ಲಿ ಹಲವು ಸಮಸ್ಯೆಗಳಿರುವುದಾಗಿ ಆರೋಪಿಸಿ, ವಿಜಯೇಂದ್ರ ಅವರನ್ನು ಬದಲಾಯಿಸದಿದ್ದರೆ ಹೊಸ ಪಕ್ಷ ಕಟ್ಟುವುದಾಗಿ ಧಮ್ಕಿ ಹಾಕಿದ್ದರು.

## ಮಧ್ಯಪ್ರದೇಶದಲ್ಲಿದೆ ಕಳ್ಳರ ಯೂನಿವರ್ಸಿಟಿ

**ದಾವಣಗೆರೆ**: ದೇಶದ ಹೃದಯ ಭಾಗವಾದ ಮಧ್ಯಪ್ರದೇಶದಲ್ಲಿ ರಾಜಾರೋಷವಾಗಿ ಕಳ್ಳತನದ ತರಬೇತಿ ಕೇಂದ್ರಗಳು, ಅಕ್ಷರಶಃ ಕಳ್ಳರ ಪಾಠಶಾಲೆಗಳು ನಡೆಯುತ್ತಿವೆ. ಇದು ಕೇವಲ ಗುಟ್ಟಿನ ದಂಧೆಯಲ್ಲ, ಬದಲಿಗೆ ₹2 ಲಕ್ಷ ಶುಲ್ಕ ಪಾವತಿಸಿದರೆ, ಅಲ್ಲಿ ಕಳ್ಳರಾಗುವ ಕುರಿತು ತರಬೇತಿ ನೀಡಲಾಗುತ್ತದೆ. ತರಬೇತಿಯಲ್ಲಿ ಪೊಲೀಸರಿಂದ ಹೇಗೆ ತಪ್ಪಿಸಿಕೊಳ್ಳುವುದು, ಪಿಕ್‌ಪಾಕೆಟ್, ದರೋಡೆ ಮತ್ತು ಜನಸಂದಣಿ ಮಧ್ಯೆ ಕಳವು ಮಾಡುವ ವಿಧಾನವನ್ನು ಇಲ್ಲಿ ಹೇಳಿಕೊಡಲಾಗುತ್ತದೆ.

ಮಧ್ಯಪ್ರದೇಶದ ರಾಜಘರ್ ಜಿಲ್ಲೆಯ ಗುಲ್ ಖೇಡಾ, ಹುಲ್ ಖೇಡಾ, ಹಾಗೂ ಕಡಿಯಾ ಸಾಂಸಿ ಎಂಬ ಗ್ರಾಮಗಳಲ್ಲಿ ಈ ತರಬೇತಿ ಕೇಂದ್ರ ಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸಿದ್ಧ ಬ್ಯಾಂಡ್ ಬಾಜಾ ಅಥವಾ ಸನ್ ದಿಸೋಡಿಯಾ ಗ್ಯಾಂಗ್‌ಗಳಂತಹ ಕುಖ್ಯಾತ ಕಳ್ಳರ ತಂಡಗಳಿಗೆ ಈ ಕೇಂದ್ರಗಳೇ ತವರುಮನೆಗಳಾಗಿವೆ ಎಂದು ಮೂಲಗಳು ತಿಳಿಸಿವೆ. ಈ ಪಾಠಶಾಲೆಗಳಲ್ಲಿ ಪ್ರವೇಶ ಪಡೆಯಲು ಆಕಾಂಕ್ಷಿಗಳು ₹2 ಲಕ್ಷದವರೆಗೂ ಶುಲ್ಕ ಪಾವತಿಸಬೇಕಾಗುತ್ತದೆ. ತಿಂಗಳೊಪ್ಪತ್ತಿನ ಈ ತರಬೇತಿ ಅವಧಿಯಲ್ಲಿ, ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿ, ಮಾಲು ಸಮೇತ ಪೊಲೀಸರಿಂದ ಪಾರಾಗುವ ಕುರಿತು ಎಲ್ಲಾ ವಿಶೇಷ ತಂತ್ರಗಳನ್ನು ಕಲಿಸಲಾಗುತ್ತದೆ. ಇಲ್ಲಿ ಕೇವಲ ವಯಸ್ಕರಿಗಷ್ಟೇ ಅಲ್ಲ, ಅಪ್ರಾಪ್ತ ಮಕ್ಕಳಿಗೂ ತರಬೇತಿ ನೀಡಲಾಗುತ್ತಿದೆ ಎಂಬುದು ಇನ್ನೊಂದು ಆಘಾತಕಾರಿ ಅಂಶವಾಗಿದೆ.


ಈ ಗ್ಯಾಂಗ್‌ಗಳು ಅತ್ಯಂತ ಕುತಂತ್ರದಿಂದ 17 ವರ್ಷದೊಳಗಿನ ಮಕ್ಕಳನ್ನೇ ಕಳ್ಳತನಕ್ಕೆ ಬಳಸಿಕೊಳ್ಳುತ್ತವೆ. ಇದಕ್ಕೆ ಮುಖ್ಯ ಕಾರಣ, ಅಪ್ರಾಪ್ತರು ಅಪರಾಧ ಮಾಡಿದರೆ ಪೊಲೀಸ್ ಕೇಸುಗಳಿಂದ ಬೇಗ ಪಾರಾಗಬಹುದು, ಶಿಕ್ಷೆಯ ಪ್ರಮಾಣ ಕಡಿಮೆ ಇರುತ್ತದೆ ಮತ್ತು ಜಾಮೀನು ಕೂಡ ಸುಲಭವಾಗಿ ಸಿಗುತ್ತದೆ. ಈ ಕಾನೂನು ಅಂತರವನ್ನೇ ಬಂಡವಾಳ ಮಾಡಿಕೊಂಡ ಆರೋಪಿಗಳು ಅಪ್ರಾಪ್ತ ಯುವಕರನ್ನು ಕಳ್ಳತನಕ್ಕೆ ಬಳಸಿಕೊಳ್ಳುತ್ತಾರೆ.

ಕಳೆದ ನವೆಂಬರ್ 14 ರಂದು ದಾವಣಗೆರೆ ಹೊರವಲಯದ ಅಪೂರ್ವಾ ರೆಸಾರ್ಟ್‌ನಲ್ಲಿ ಆಯೋಜಿಸಿದ್ದ ವಿವಾಹ ಸಮಾರಂಭವೊಂದರಲ್ಲಿ ಬ್ಯಾಂಡ್ ಬಾಜಾ ಗ್ಯಾಂಗ್‌ನ ಇಬ್ಬರು ಕಳ್ಳರು ಮದುವೆಗೆ ಬಂದು, ಪದ್ಮಾವತಿ ಎಂಬುವವರ ₹67.48 ಲಕ್ಷ ರೂ. ಮೌಲ್ಯದ ಚಿನ್ನಾಭರಣದ ಬ್ಯಾಗ್ ಕದ್ದು ಪರಾರಿಯಾಗಿದ್ದರು. ಕಳ್ಳರ ಬೆನ್ನತ್ತಿದ ದಾವಣಗೆರೆ ಪೊಲೀಸ್ ತಂಡವು ಸುದೀರ್ಘ ಕಾರ್ಯಾಚರಣೆಯನ್ನು ಕೈಗೊಂಡಿತು. ಸುಮಾರು 1500 ಕಿಲೋಮೀಟರ್ ದೂರದ ಮಧ್ಯಪ್ರದೇಶದ ಪಚೋರಿ ನಗರಕ್ಕೆ ಮಾರು ವೇಷದಲ್ಲಿ ತೆರಳಿದರು. ಸತತ 15 ದಿನಗಳ ಕಾಲ ಅಲ್ಲೇ ವಾಸವಿದ್ದು, ಸ್ಥಳೀಯ ಪೊಲೀಸರು ಮತ್ತು ಬಾತ್ಮೀದಾರರ ಸಹಾಯದಿಂದ ಆರೋಪಿಗಳು ಎಲ್ಲಿ ಇರುತ್ತಾರೆ ಎಂಬ ನಿಖರ ಮಾಹಿತಿ ಸಂಗ್ರಹಿಸಿದರು. ಅಂತಿಮವಾಗಿ, ಕಳುವಾದ ಆಭರಣಗಳಲ್ಲಿ ₹51.49 ಲಕ್ಷ ಮೌಲ್ಯದ ಮಾಲನ್ನು ವಶಪಡಿಸಿಕೊಳ್ಳುವಲ್ಲಿ ದಾವಣಗೆರೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಆರೋಪಿಗಳಾದ ಮಧ್ಯಪ್ರದೇಶದ ರಾಜ್‌ಗಡ್ ಜಿಲ್ಲೆಯ ಗುಲ್‌ಖೇಡಾ ಗ್ರಾಮದ ಕರಣ್ ವರ್ಮಾ ಮತ್ತು ವಿನಿತ್ ಸಿಸೋಡಿಯಾ ಸದ್ಯಕ್ಕೆ ಪರಾರಿಯಾಗಿದ್ದರೂ, ಪೊಲೀಸರು ಅವರಿಗಾಗಿ ಶೋಧಕಾರ್ಯ ಮುಂದುವರೆದಿದೆ. ಪೊಲೀಸರು ಅವರಿಗಾಗಿ ಸುಮಾರು 250ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳ ಪರಿಶೀಲನೆ, 15 ಟೋಲ್‌ಗೇಟ್‌ಗಳಲ್ಲಿನ ದೃಶ್ಯಗಳ ವಿಶ್ಲೇಷಣೆ, ತಾಂತ್ರಿಕ ಮಾಹಿತಿ ಆಧಾರದ ಮೇಲೆ ಕಳುವಾದ ಆಭರಣವನ್ನ ಪತ್ತೆಹಚ್ಚಿದ್ದರು.

'ಬ್ಯಾಂಡ್ ಬಾಜಾ' ಹೆಸರಿನ ಈ ಗ್ಯಾಂಗ್‌ಗಳ ಪ್ರಮುಖ ಟಾರ್ಗೆಟ್ ಇರುವುದು ಭರ್ಜರಿ ವಿವಾಹ ಸಮಾರಂಭಗಳು. ರೆಸಾರ್ಟ್‌ಗಳು ಅಥವಾ ದೊಡ್ಡ ಕಲ್ಯಾಣ ಮಂಟಪಗಳಲ್ಲಿ ನಡೆಯುವ ಮದುವೆಗಳಲ್ಲಿ ಈ ಕಳ್ಳರು ಶ್ರೀಮಂತರ ವೇಷದಲ್ಲಿ ಮದುವೆಗೆ ಭಾಗವಹಿಸುತ್ತಾರೆ. ನಂತರ ಜನರ ಗಮನ ಬೇರೆಡೆಯಾದಾಗ, ಕ್ಷಣಾರ್ಧದಲ್ಲಿ ಬೆಲೆಬಾಳುವ ಚಿನ್ನಾಭರಣಗಳನ್ನು ದೋಚಿ ಪರಾರಿಯಾಗುತ್ತಾರೆ. ಪೊಲೀಸರಿಗೆ ಯಾವುದೇ ಸಾಕ್ಷ್ಯ ಸಿಗದಂತೆ ಮಾಡುವುದು ಮತ್ತು ತನಿಖೆಯ ದಾರಿಯನ್ನು ತಪ್ಪಿಸುವುದು ಇವರಿಗೆ ಕರಗತವಾದ ಕಲೆ. ಈ ಕಳ್ಳರ ತಂಡದ ವಿರುದ್ಧ ದೇಶಾದ್ಯಂತ 400ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ.

## ರಾಜ್ಯದ 7 ಮಹಾನಗರ ಪಾಲಿಕೆಗೆ ರೂ.1,400 ಕೋಟಿ ವಿಶೇಷ ಅನುದಾನ ಬಿಡುಗಡೆ:




**ಬೆಳಗಾವಿ:** ರಾಜ್ಯದ 7 ಮಹಾನಗರ ಪಾಲಿಕೆಗಳಿಗೆ ತಲಾ ರೂ.200 ಕೋಟಿಯಂತೆ ರೂ.1,400 ಕೋಟಿ ವಿಶೇಷ ಅನುದಾವನ್ನು ನೀಡಲಾಗಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಹೇಳಿದರು.

ವಿಧಾನ ಸಭೆ ಪ್ರಶ್ನೋತ್ತರ ಕಲಾಪದಲ್ಲಿ ಮಾತನಾಡಿದ ಸಚಿವ ಬಿ.ಎಸ್.ಸುರೇಶ್ ಅವರು, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆಗಳನ್ನಾಗಿ ಉನ್ನತೀಕರಿಸುವ ವೇಳೆ ಹತ್ತಿರ ಇರುವ ಗ್ರಾಮಾಂತರ ಪ್ರದೇಶಗಳನ್ನು ಸಹ ಸೇರ್ಪಡೆ ಮಾಡಿ ಸರಹದ್ದು ನಿಗದಿಪಡಿಸಲಾಗುತ್ತಿದೆ. ಆದರೆ ಕೆಲ ಶಾಸಕರು ನಗರಸಭೆ ವ್ಯಾಪ್ತಿಯಿಂದ ಗ್ರಾಮಗಳನ್ನು ಕೈಬಿಡುವಂತೆ ಮನವಿ ಮಾಡುತ್ತಾರೆ. ಇದು ಕಷ್ಟದ ಕೆಲಸವಾಗಿದೆ. ಸರ್ಕಾರ ನಗರಸಭೆ ವ್ಯಾಪ್ತಿಗೆ ಸೇರ್ಪಡೆ ಮಾಡಿದ ಗ್ರಾಮಗಳ ಅಭಿವೃದ್ಧಿಗೆ ಹಣ ನೀಡಲಿದೆ, ಶಾಸಕರು ತಾಳ್ಮೆ ವಹಿಸಬೇಕು ಎಂದು ತಿಳಿಸಿದರು. ಕರ್ನಾಟಕ ಪೌರಸಭೆಗಳ ಅಧಿನಿಯಮದ ಮಾನದಂಡಗಳ ಪ್ರಕಾರ 20,000 ದಿಂದ 50,000 ಜನಸಂಖ್ಯೆ, ಅಥವಾ ಚದರ ಮೀಟರ್ಗೆ 1,500 ಜನಸಾಂದ್ರತೆ, ರೂ.9 ಲಕ್ಷ ರಾಜಸ್ವ ಆದಾಯ, ಇಲ್ಲವೆ ಶೇ.50 ರಷ್ಟು ಕೃಷಿಯೇತರ ಚಟುವಟಿಕೆ ನಡೆಯುತ್ತಿದ್ದರೆ ಅಂತಹ ಸ್ಥಳವನ್ನು ಪುರಸಭೆಯನ್ನಾಗಿ ಉನ್ನತಿಕರಿಸಲಾಗುವುದು.

ಆದರೆ ಹೊನ್ನಾವರ ಪಟ್ಟಣದಲ್ಲಿ 2011ರ ಜನಗಣತಿ ಅನ್ವಯ 19,109 ಜನಸಂಖ್ಯೆಯಿದೆ. ಈ ಹಿನ್ನಲೆಯಲ್ಲಿ ಹೊನ್ನಾವರ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ತಿರಸ್ಕರಿಸಲಾಗಿದೆ ಎಂದು ಸಚಿವ ಬಿ.ಎಸ್.ಸುರೇಶ್ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಅವರ ಪರವಾಗಿ ಶಾಸಕ ದಿನಕರ್ ಕೇಶವ್ ಶೆಟ್ಟಿ ಅವರಿಗೆ ಉತ್ತರಿಸಿದರು.

ಪ್ರಸ್ತುತ ಹೊನ್ನಾವರದಲ್ಲಿ 20 ಸಾವಿರಕ್ಕೂ ಅಧಿಕ ಜನಸಂಖ್ಯೆಯಿದೆ. ವ್ಯಾಪಾರ ವಹಿವಾಟುಗಳು ಪಟ್ಟಣದಲ್ಲಿ ಹೆಚ್ಚಾಗಿವೆ. ಜನರು ಕೃಷಿಯೇತರ ಆದಾಯದಿಂದಲೇ ಬದುಕುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಸರ್ಕಾರ ಹೊನ್ನಾವರನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೆ ಏರಿಸಬೇಕು. ಪ್ರಮುಖ ಪ್ರವಾಸಿ ತಾಣವಾದ ಗೋಕರ್ಣ 33 ಸದಸ್ಯರು ಇರುವ ದೊಡ್ಡ ಗ್ರಾಮ ಪಂಚಾಯಿತಿಯಾಗಿದೆ. ನಿತ್ಯ ಸಾವಿರಾರು ಪ್ರವಾಸಿಗರು ಗೋಕರ್ಣಕ್ಕೆ ಭೇಟಿ ನೀಡುತ್ತಾರೆ. ಸರ್ಕಾರ ಗೋಕರ್ಣವನ್ನು ಪಟ್ಟಣ ಪಂಚಾಯಿತಿಯಾಗಿ ಪರಿವರ್ತಿಸಬೇಕು ಎಂದು ಶಾಸಕ ದಿನಕರ್ ಕೇಶವ್ ಶೆಟ್ಟಿ ಕೋರಿದರು.

## ವೃದ್ಧೆ ಬದುಕಿದ್ದಾಗಲೇ ಡೆತ್ ಸರ್ಟಿಫಿಕೇಟ್ ಮಾಡಿಸಿ ಆಸ್ತಿ ಲಪಟಾಯಿಸಿದ ಭೂಪ



**ಹಾಸನ:** ಮಹಿಳೆ ಬದುಕಿರುವಾಗಲೇ ಮರಣ ಪ್ರಮಾಣ ಪತ್ರ, ಮಾಡಿಸಿ ಆಸ್ತಿ ಲಪಟಾಯಿಸಿದ ಆರೋಪ ಸಕಲೇಶಪುರ ಚಿಕ್ಕನಾಯಕನಹಳ್ಳಿ ಗ್ರಾಮದಲ್ಲಿ ಕೇಳಿ ಬಂದಿದೆ ಗ್ರಾಮದ ಮಹಿಳೆ ಸಿದ್ದಮ್ಮ ಅವರ ಹೆಸರಿನಲ್ಲಿ ಸರ್ವೆ ನಂ.68 ರಲ್ಲಿ 1 ಎಕರೆ 20 ಗುಂಟೆ ಭೂಮಿ ಇದೆ.

ಈ ಭೂಮಿಯನ್ನು ಬಾಳ್ಳುಪೇಟೆ ಗ್ರಾಮದ ಶೇಖ್ ಅಹಮದ್ ಎಂಬಾತ ದತ್ತು ಪುತ್ರ ಎಂದು ವಂಶ ವೃಕ್ಷ ಮಾಡಿಸಿ, 2008 ರಲ್ಲೇ ಸಿದ್ದಮ್ಮ ವಿಲ್ ಮಾಡಿದಂತೆ ನಕಲಿ ದಾಖಲೆ ಸೃಷ್ಟಿ ಮಾಡಿದ್ದಾನೆ. ಬಳಿಕ 2009ರ ಅ.4 ರಂದು ಮರಣ ಹೊಂದಿದಂತೆ ಮರಣ ಪ್ರಮಾಣ ಪತ್ರ ಮಾಡಿಸಿ ಭೂಮಿಯನ್ನು ಲಪಟಾಯಿಸಿದ್ದಾನೆ ಎಂದು ಆರೋಪಿಸಲಾಗಿದೆ. ಶೇಖ್ ಅಹಮದ್ ವಿರುದ್ಧ ಮಹಿಳೆ ಸಿದ್ದಮ್ಮ ಹಾಗೂ ಪುತ್ರ ನಿಂಗರಾಜು ದೂರು ನೀಡಿದ್ದಾರೆ.

ಆರೋಪಿ ವಿರುದ್ಧ ಸೂಕ್ತ ಕ್ರಮಕ್ಕೆ ಸಿದ್ದಮ್ಮ ಕುಟುಂಬಸ್ಥರು ಆಗ್ರಹಿಸಿದ್ದಾರೆ. ನಕಲಿ ದಾಖಲೆ ಸೃಷ್ಟಿಸಲು ನೆರವಾದ ಗ್ರಾಮ ಲೆಕ್ಕಾಧಿಕಾರಿ, ಕಂದಾಯ ನಿರೀಕ್ಷಕ, ಉಪ ತಹಶೀಲ್ದಾರ್ ಸೇರಿ ಕಂದಾಯ ಇಲಾಖೆ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದಾರೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

## ಸುತ್ತೂರು ಜಯಂತೋತ್ಸವಕ್ಕೆ ರಾಷ್ಟ್ರಪತಿ ದ್ರೌಪತಿ ಮುರ್ಮು: ಮಳವಳ್ಳಿಯಲ್ಲಿ ಬಿಗಿ ಭದ್ರತೆಬಿಡುಗಡೆ:

ಬೆಂಗಳೂರ: ಇತ್ತೀಚೆಗೆ ಕರ್ನಾಟಕಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿದ್ದರು. ಇದೀಗ ರಾಷ್ಟ್ರಪತಿ ಸರದಿ. ಡಿ.16ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಜ್ಯಕ್ಕೆ ಆಗಮಿಸುತ್ತಿದ್ದಾರೆ. ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ನಡೆಯಲಿರುವ ಆದಿ ಜಗದ್ಗುರು ಶಿವರಾತ್ರೀಶ್ವರ ಶ್ರೀಗಳ 1066ನೇ ಜಯಂತಿಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಹೀಗಾಗಿ ಬಿಗಿ ಭದ್ರತೆ ಕೈಗೊಳ್ಳಲಾಗುತ್ತಿದೆ. ಸುತ್ತೂರು ಮಠದ ಕಾರ್ಯಕ್ರಮದಲ್ಲಿ ಭಾಗಿಯಾಗಲಿರುವ ದ್ರೌಪದಿ ಮುರ್ಮು

ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ಆದಿ ಜಗದ್ಗುರು ಶಿವರಾತ್ರೀಶ್ವರ ಶ್ರೀಗಳ 1066ನೇ ಜಯಂತಿ ಮಹೋತ್ಸವವನ್ನು ಆಯೋಜಿಸಲಾಗಿದೆ. ಮಳವಳ್ಳಿಯ ಮುನ್ಸಿಪಲ್ ಮೈದಾನದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ವಿವರ ಮೈಸೂರಿನ ಏರ್‌ಪೋರ್ಟ್‌ಗೆ ಆಗಮಿಸಲಿರುವ ದ್ರೌಪದಿ ಮುರ್ಮು, ಬಳಿಕ ಹೆಲಿಕಾಪ್ಟರ್‌ನಲ್ಲಿ ಮಂಡ್ಯ ಜಿಲ್ಲೆಯ ಮಳವಳ್ಳಿಗೆ ತೆರಳುತ್ತಾರೆ. ಮಳವಳ್ಳಿಯಲ್ಲಿ ನಡೆಯುವ ಸುತ್ತೂರು ಮಠದ ಕಾರ್ಯಕ್ರಮದಲ್ಲಿ ಭಾಗಿ ಆಗುತ್ತಾರೆ. ಅಂದು ಸಂಜೆ 5.25ಕ್ಕೆ ಮಳವಳ್ಳಿಯಿಂದ ಮೈಸೂರಿಗೆ ಹಿಂದಿರುಗುವ ರಾಷ್ಟ್ರಪತಿ, ಡಿ.16ರಂದು ರಾತ್ರಿ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿ.17ರ ಬೆಳಗ್ಗೆ 9.25ಕ್ಕೆ ಮೈಸೂರಿನಿಂದ ತಿರುಪತಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತೆರಳುತ್ತಾರೆ. ಇನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಮಂಡ್ಯ ಜಿಲ್ಲೆಗೆ ಭೇಟಿ ಹಿನ್ನಲೆ ಇತ್ತೀಚೆಗೆ ಜಿಲ್ಲಾಧಿಕಾರಿ ಡಾ. ಕುಮಾರ್ ಅವರು ಅಧಿಕಾರಿಗಳೊಂದಿಗೆ ಸಭೆ ಮಾಡಿ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸೂಚನೆ ನೀಡಿದ್ದಾರೆ. ರಾಷ್ಟ್ರಪತಿ ಸಂಚರಿಸುವ ರಸ್ತೆ ದುರಸ್ತಿಗೊಳಿಸಬೇಕು. ಆಗದಂತೆ ನೀಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.